₹ 4 ಪುಟ: 4 ಸಂಪುಟ: 4 ಸಂಚಿಕೆ 58 newsbelagavi@gmail.com 9900332089 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Volume : 4 Issue: 58 Sunday, 16, APRIL, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

## ಶಿಗ್ಗಾಂವಿಯಲ್ಲಿ ನಾಮಪತ್ರ ಸಲ್ಲಿಸಿದ ಸಿಎಂ ಬೊಮ್ಮಾಯಿ




ಹಾವೇರಿ/ಧಾರವಾಡ: ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು, ಹಾವೇರಿ ಜಿಲ್ಲೆ ಶಿಗ್ಗಾಂವಿಯಲ್ಲಿ ಶನಿವಾರ ನಾಮಪತ್ರ ಸಲ್ಲಿಸಿದರು.

ಬೆಂಗಳೂರಿನಿಂದ ಶಿಗ್ಗಾಂವಿಗೆ ಆಗಮಿಸಿದ ಬೊಮ್ಮಾಯಿಯಿರುವ ಸಾಂಕೇತಿಕವಾಗಿ ನಾಮಪತ್ರ ಸಲ್ಲಿಸಿದರು.

ಈ ವೇಳೆ ಸಂಸದ ಶಿವಕುಮಾರ್ ಉದಾಸಿ, ಸಚಿವ ಸಿ.ಸಿ ಪಾಟೀಲ್, ಶಿಗ್ಗಾಂವಿ ಕ್ಷೇತ್ರದ ಬಿಜೆಪಿ ಹಿರಿಯ ಮುಖಂಡರು ಮತ್ತು ಕುಟುಂಬಸ್ಥರು ಸಿಎಂ ಬೊಮ್ಮಾಯಿಗೆ ಸಾಥ್ ನೀಡಿದರು.

ಹುರುಳಿಕುಪ್ಪಿ, ಕಾರಡಗಿ, ತಡಸ, ಧುಂಡಸಿ, ಹುಲುಗೂರು, ಕುಂದೂರು, ಜಿಲ್ಲಾ ಪಂಚಾಯಿತಿ ವ್ಯಾಪ್ತಿ ಮುಖಂಡರ ಜೊತೆ ಸಿಎಂ ಸಭೆ ನಡೆಸಲಿದ್ದಾರೆಂದು ತಿಳಿದುಬಂದಿದೆ.

# ವಿಧಾನಸಭಾ ಚುನಾವಣೆಗೆ ಕಾಂಗ್ರೆಸ್ ಮೂರನೇ ಪಟ್ಟಿ ಬಿಡುಗಡೆ



ಬೆಂಗಳೂರು: ಕರ್ನಾಟಕ ವಿಧಾನಸಭಾ ಚುನಾವಣೆಗೆ ಕಾಂಗ್ರೆಸ್ ಮೂರನೇ ಪಟ್ಟಿ ಬಿಡುಗಡೆ ಮಾಡಿದ್ದು, 43 ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಿಸಿದೆ. ಈಗಾಗಲೇ ಮೊದಲ ಪಟ್ಟಿಯಲ್ಲಿ 124 ಹಾಗೂ ಎರಡನೇ ಪಟ್ಟಿಯಲ್ಲಿ 42 ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಿಸಿದ್ದ ಕಾಂಗ್ರೆಸ್ ಈಗ 43 ಕ್ಷೇತ್ರಗಳಿಗೆ ಅಭ್ಯರ್ಥಿಗಳ ಹೆಸರು ಅಂತಿಮಗೊಳಿಸಿದ್ದು, ಇನ್ನು 15 ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಿಸಬೇಕಿದೆ. ಶುಕ್ರವಾರವಷ್ಟೇ ಬಿಜೆಪಿ ತೊರೆದು ಕಾಂಗ್ರೆಸ್ ಸೇ–ರಿದ್ದ ಲಕ್ಷ್ಮಣ್ ಸವದಿಗೆ ಅಥ–'ಣಿ ಟಿಕೆಟ್ ನೀಡಲಾಗಿದೆ. ಸಿದ್ದರಾಮಯ್ಯನವರ ಎರಡು ಕ್ಷೇತ್ರ ಸ್ಪರ್ಧೆಗೆ ಸೊಪ್ಪುಹಾಕದ ಕಾಂಗ್ರೆಸ್ ಹೈಕಮಾಂಡ್ ಕೋಲಾರ ಕ್ಷೇತ್ರಕ್ಕೆ ಕೊತ್ತೂರು ಮಂಜುನಾಥ್ ಅವರಿಗೆ ಟಿಕೆಟ್.ನೀಡಿದೆ. ಚಿಕ್ಕಬಳ್ಳಾಪುರದಲ್ಲಿ ಆರೋಗ್ಯ ಸಚಿವ ಡಾ ಕೆ ಸುಧಾಕರ್ ಎದುರು ಪ್ರದೀಪ್ ಈಶ್ವರ್ ಅವ–ರಿಗೆ ಟಿಕೆಟ್ ನೀಡಲಾಗಿದ್ದು, ಚಿಕ್ಕಪೇಟೆಗೆ ಆರ್ ವಿ ದೇವರಾಜ್. ಅವರಿಗೆ ಟಿಕೆಟ್ ಘೋಷಿಸಲಾಗಿದೆ. ಕುಂದಗೋಳದಲ್ಲಿ ಹಾಲಿ ಶಾಸಕಿ ಕುಸುಮಾ ಶಿವಳ್ಳಿ.ಅವರಿಗೆ ಟಿಕೆಟ್ ನೀಡಲಾಗಿದ್ದು, ಅರಸೀಕೆರೆ ಕ್ಷೇತ್ರಕ್ಕೆ.ಶಿವಲಿಂಗೇಗೌಡ ಅವರಿಗೆ ಟಿಕೆಟ್ ಘೋಷಿಸಲಾಗಿದೆ.

ಪುಲಿಕೇಶಿ ನಗರದಲ್ಲಿ ಟಿಕೆಟ್ ಇನ್ನೂ ಘೋಷಣೆಯಾಗಿಲ್ಲ. ಈ ಹಿನ್ನೆಲೆ ಹಾಲಿ ಶಾಸಕ ಅಖಂಡ ಶ್ರೀನಿವಾಸ್ ಮೂರ್ತಿ ಅತಂತ್ರರಾಗಿದ್ದಾರೆ.

**16 ಹೊಸಮುಖಗಳಿಗೆ ಅವಕಾಶ ನೀಡಲಾಗಿದೆ.**

ನಿಪ್ಪಾಣಿ– ಕಾಕಾಸಾಹೇಬ್ ಪಾಟೀಲ್
ಗೋಕಾಕ್– ಮಹಂತೇಶ್ ಕಡಾಡಿ
ಬೆಳಗಾವಿ ದಕ್ಷಿಣ: ಪ್ರಭಾವತಿ ಮಾಸ್ತಿ ಮರಡಿ
ರಾಯಬಾಗ: ಮಹಾವೀರ ಮೋಹಿತೆ
ಕಿತ್ತೂರು–ಬಾಬಾಸಾಹೇಬ್ ಬಿ.ಪಾಟೀಲ್
ಸೌದತ್ತಿ ಯಲ್ಲಮ್ಮ– ವಿಶ್ವಾಸ್ ವಸಂತ್ ವೈದ್ಯ
ಮುಧೋಳ (ಎಸ್‌ಸಿ)– ರಾಮಪ್ಪ ಬಾಲಪ್ಪ ತಿಮ್ಮಾಪುರ
ಬೀಳಗಿ– ಜೆ.ಟಿ. ಪಾಟೀಲ್
ಬಾದಾಮಿ– ಭೀಮಸೇನ್ ಬಿ. ಚಿಮ್ಮನಕಟ್ಟಿ
ಬಾಗಲಕೋಟೆ –ಹುಲ್ಲಪ್ಪ ವೈ. ಮೇಟಿ
ಬಿಜಾಪುರ ನಗರ– ಅಬ್ದುಲ್ ಹಮೀದ್ ಖಾಜಾಸಾಹೇಬ್ ಮುಶ್ರಿಫ್
ನಾಗಠಾಣ (ಎಸ್‌ಸಿ) – ವಿಠಲ ಕಟಕದೊಂಡ
ಅಫ್ಜಲ್‌ಪುರ– ಎಂ.ವೈ. ಪಾಟೀಲ್
ಯಾದಗಿರಿ– ಚನ್ನರೆಡ್ಡಿ ಪಾಟೀಲ್ ತುಣ್ಣೂರ್
ಗುರಮಿಠಕಲ್– ಬಾಬುರಾವ್ ಚಿಂಚನಸೂರ
ಗುಲ್ಬರ್ಗ ದಕ್ಷಿಣ – ಅಲ್ಲಮಪ್ರಭು ಪಾಟೀಲ್
ಬಸವಕಲ್ಯಾಣ – ವಿಜಯ್ ಧರಂ ಸಿಂಗ್
ಗಂಗಾವತಿ– ಇನ್ಸಾಲ್ ಅನ್ಸಾರಿ
ನರಗುಂದ–ಬಿಆರ್ ಯಾವಗಲ್
ಧಾರವಾಡ– ವಿನಯ್ ಕುಲಕರ್ಣಿ
ಕಲಘಟಗಿ–ಸಂತೋಷ್ ಎಸ್. ಲಾಡ್
ಶಿರಸಿ– ಭೀಮಣ್ಣ ನಾಯ್ಕ
ಯಲ್ಲಾಪುರ – ಆರ್ ವಿ.ಎಸ್.ಪಾಟೀಲ್
ಕೂಡ್ಲಿಗಿ (ಎಸ್‌ಟಿ)–ಡಾ ಶ್ರೀನಿವಾಸ್ ಎಂ.ಟಿ
ಮೊಳಕಾಲ್ಮೂರು (ಎಸ್‌ಟಿ)–ಎನ್.ವೈ. ಗೋಪಾಲಕೃಷ್ಣ
ಚಿತ್ರದುರ್ಗ– ಕೆ.ಸಿ.ವೀರೇಂದ್ರ (ಪಪ್ಪಿ)ನ
ಹೊಳಲ್ಕೆರೆ (ಎಸ್‌ಸಿ)– ಆಂಜನೇಯ ಎಚ್
ಚೆನ್ನಗಿರಿ – ಬಸವರಾಜು ವಿ ಶಿವಗಂಗ
ತೀರ್ಥಹಳ್ಳಿ – ಕಿಮ್ಮನೆ ರತ್ನಾಕರ್
ಉಡುಪಿ– ಪ್ರಸಾದ್ ರಾಜ್ ಕಾಂಚನ್
ಕಡೂರು– ಆನಂದ್ ಕೆ.ಎಸ್
ತುಮಕೂರು ನಗರ– ಇಕ್ಬಾಲ್ ಅಹ್ಮದ್
ಗುಬ್ಬಿ – ಎಸ್.ಆರ್. ಶ್ರೀನಿವಾಸ್
ಯಲಹಂಕ– ಕೇಶವ ರಾಜಣ್ಣ.ಬಿ
ಯಶವಂತಪುರ –ಬೈರಾಜ್ ಗೌಡ
ಮಹಾಲಕ್ಷ್ಮಿ ಲೇಔಟ್– ಕೇಶವಮೂರ್ತಿ
ಪದ್ಮನಾಭ ನಗರ– ವಿ.ರಘುನಾಥ ನಾಯ್ಡು
ಮೇಲುಕೋಟೆ – ದರ್ಶನ್ ಪುಟ್ಟಣ್ಣಯ್ಯಗೆ ಬೆಂಬಲ
ಮಂಡ್ಯ – ಪಿ ರವಿ ಕುಮಾರ್
ಕೃಷ್ಣರಾಜಪೇಟೆ– ಬಿ.ಎಲ್.ದೇವರಾಜ್
ಬೇಲೂರು–ಬಿ.ಶಿವರಾಮ್
ಮಡಿಕೇರಿ––ಡಾ.ಮಂತರ್ ಗೌಡ
ಚಾಮುಂಡೇಶ್ವರಿ –ಸಿದ್ದೇಗೌಡ
42. ಕೊಳ್ಳೇಗಾಲ (ಎಸ್‌ಸಿ)–ಎ.ಆರ್. ಕೃಷ್ಣಮೂರ್ತಿ

## 6 ಅಭ್ಯರ್ಥಿಗಳನ್ನು ಘೋಷಣೆ ಮಾಡಿದ ಹೆಚ್.ಡಿ.ಕುಮಾರಸ್ವಾಮಿ



ಬೆಂಗಳೂರು: ಈಗಾಗಲೇ ಪ್ರಸಕ್ತ ವಿಧಾನಸಭೆ ಚುನಾವಣೆಯ ಜೆಡಿ–ಎಸ್ ಅಭ್ಯರ್ಥಿಗಳ ಎರಡು ಪಟ್ಟಿಗಳನ್ನು ಬಿಡುಗಡೆ ಮಾಡಿರುವ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು, ಶನಿವಾರ ಮತ್ತೆ ಆರು ಅಭ್ಯರ್ಥಿಗಳ ಹೆಸರುಗಳನ್ನು ಘೋಷಣೆ ಮಾಡಿದರು.

ಚಿತ್ರದುರ್ಗಕ್ಕೆ ವಿಧಾನ ಪರಿಷತ್ ನ ಮಾಜಿ ಸದಸ್ಯ ರಘು ಅಚಾರ್, ಮಡಿಕೇರಿಗೆ ಎನ್.ಎಂ.ಮುತ್ತಪ್ಪ, ಮೂಡಬಿದಿರೆಗೆ ಅಮರಶ್ರೀ, ವರುಣಾ ಕ್ಷೇತ್ರಕ್ಕೆ ಮಾಜಿ ಶಾಸಕ ಡಾ.ಭಾರತಿ ಶಂಕರ್, ಬಾಗಲಕೋಟೆ ಕ್ಷೇತ್ರಕ್ಕೆ ದೇವರಾಜ್ ಪಾಟೀಲ್ ಹಾಗೂ ಯಾದಗಿರಿ ಕ್ಷೇತ್ರಕ್ಕೆ ಮಾಜಿ ಸಚಿವ ಎ.ಬಿ.ಮಾಲಕರೆಡ್ಡಿ ಅವರು ಜೆಡಿಎಸ್ ಅಭ್ಯರ್ಥಿಗಳು ಎಂದು ಮಾಧ್ಯಮಗೋಷ್ಠಿಯಲ್ಲಿ ಮಾಜಿ ಮುಖ್ಯಮಂತ್ರಿಗಳು ಪ್ರಕಟಿಸಿದರು.

ಎನ್ ಆರ್ ಸಂತೋಷ್, ದೇವರಾಜ್ ಪಾಟೀಲ್ ಸೇರ್ಪಡೆ:

ಇದೇ ಸಂದರ್ಭದಲ್ಲಿ ಅರಸೀಕೆರೆ ವಿಧಾನಸಭೆ ಕ್ಷೇತ್ರದ ಎನ್ ಆರ್ ಸಂತೋಷ್ ಅವರು ಬಿಜೆಪಿ ತೊರೆದು ಜೆಡಿಎಸ್ ಪಕ್ಷವನ್ನು ಸೇರಿದರು. ಹಾಗೆಯೇ, ಬಾಗಲಕೋಟೆಯ ದೇವರಾಜ್ ಪಾಟೀಲ್ ಅವರು ಕಾಂಗ್ರೆಸ್ ತೊರೆದು ಪಕ್ಷಕ್ಕೆ ಸೇ–ರಿದರು.

ಕುಮಾರಸ್ವಾಮಿ ಅವರು, ಪಕ್ಷದ ರಾಜ್ಯಾಧ್ಯಕ್ಷ ಸಿಎಂ ಇಬ್ರಾಹಿಂ ಅವರು ಇಬ್ಬರೂ ನಾಯಕರಿಗೆ ಪಕ್ಷದ ಶಾಲು ಹೊದಿಸಿ ಬರಮಾಡಿಕೊಂಡರು.

## ನ್ಯಾಯಾಲಯಕ್ಕೆ ಸುಳ್ಳು ಹೇಳಿಕೆ; ಸಿಬಿಐ, ಇಡಿ ವಿರುದ್ಧ ಮೊಕದ್ದಮೆ ಹೂಡುತ್ತೇನೆ: ಕೇಜ್ರಿವಾಲ್



ನವದೆಹಲಿ: ಸುಳ್ಳು ಸಾಕ್ಷಿ ಮತ್ತು ನ್ಯಾಯಾಲಯಗಳಲ್ಲಿ ಸುಳ್ಳು ಅಫಿಡವಿಟ್ ಸಲ್ಲಿಸಿದ ಆರೋಪದ ಮೇಲೆ ಕೇಂದ್ರೀಯ ತನಿಖಾ ಸಂಸ್ಥೆ ಮತ್ತು ಜಾರಿ ನಿರ್ದೇಶನಾಲಯದ ಅಧಿಕಾರಿಗಳ ವಿರುದ್ಧ ಮೊಕದ್ದಮೆ ಹೂಡುವುದಾಗಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಶನಿವಾರ ಹೇಳಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಜ್ರಿವಾಲ್ ಗೆ ಸಿಬಿಐ ಸಮನ್ಸ್ ನೀಡಿದ್ದು, ತನಿಖಾ ತಂಡದ ಪ್ರಶ್ನೆಗಳಿಗೆ ಉತ್ತರಿಸಲು ಭಾನುವಾರ ಬೆಳಗ್ಗೆ 11 ಗಂಟೆಗೆ ಬೆಳಗ್ಗೆ 11 ಗಂಟೆಗೆ ಏಜೆನ್ಸಿ ಪ್ರಧಾನ ಕಚೇ–ರಿಗೆ ಹಾಜರಾಗುವಂತೆ ತಿಳಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ತನಿಖಾ ಸಂಸ್ಥೆ ದೆಹಲಿಯ ಮಾಜಿ ಉಪಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಅವರನ್ನು ಈಗಾಗಲೇ ಬಂಧಿಸಿದೆ.

ಸುದ್ದಿ ಗೋಷ್ಠಿಯಲ್ಲಿಂದು ಮಾತನಾಡಿದ ಕೇಜ್ರಿವಾಲ್, ಕೇಂದ್ರ ತನಿಖಾ ಸಂಸ್ಥೆಗಳು ನ್ಯಾಯಾಲಯಗಳಲ್ಲಿ ಸುಳ್ಳು ಅಫಿಡವಿಟ್‌ಗಳನ್ನು ಸಲ್ಲಿಸುತ್ತಿವೆ ಎಂದು ಆರೋಪಿಸಿದರು.ಸುಳ್ಳು ಸಾಕ್ಷ್ಯ ಮತ್ತು ನ್ಯಾಯಾಲಯಗಳಲ್ಲಿ ಸುಳ್ಳು ಸಾಕ್ಷ್ಯವನ್ನು ಒದಗಿಸುವುದಕ್ಕಾಗಿ ಸಿಬಿಐ ಮತ್ತು ಇಡಿ ಅಧಿಕಾರಿಗಳ ವಿರುದ್ಧ ಸೂಕ್ತ ಪ್ರಕರಣಗಳನ್ನು ದಾಖಲಿಸುತ್ತೇವೆ ಎಂದು ಅವರು ಟ್ವೀಟ್ ಮಾಡಿದ್ದಾರೆ.

ಇದಕ್ಕೂ ಮುನ್ನಾ ಮಾತನಾಡಿದ ಕೇಜ್ರಿವಾಲ್, ಮಾಜಿ ಉಪ ಮುಖ್ಯಮಂತ್ರಿ ಮನೀಶ್ ಸಿಸೋಡಿಯಾ 14 ಫೋನ್‌ಗಳನ್ನು ನಾಶಪಡಿಸಿದ್ದಾರೆ ಎಂದು ಇಡಿ ತನ್ನ ಚಾರ್ಜ್ ಶೀಟ್‌ನಲ್ಲಿ ಉಲ್ಲೇಖಿಸಿದೆ. ಈ ಫೋನ್‌ಗಳ ಐಎಂಇಐ ಸಂಖ್ಯೆಗಳನ್ನು ಸಹ ದಾಖಲೆಗಳಲ್ಲಿ ಸೇರಿಸಲಾಗಿದೆ ಎಂದರು.

ಈ 14 ಫೋನ್‌ಗಳಲ್ಲಿ ನಾಲ್ಕು ಇಡಿ ಮತ್ತು ಒಂದು ಸಿಬಿಐ ಬಳಿ ಇವೆ ಎಂದು ವಶಕ್ಕೆ ಪಡೆದ ಮೆಮೊ ತೋರಿಸುತ್ತದೆ. ಇತರ ಹೆಚ್ಚಿನ ಫೋನ್‌ಗಳು ಅಸ್ತಿತ್ವದಲ್ಲಿದ್ದು, ಸ್ವಯಂಸೇವಕರಿಂದ ಬಳಸುತ್ತಿವೆ. ಈ ಫೋನ್‌ಗಳ ಬಗ್ಗೆ ಇಡಿ ಮತ್ತು ಸಿಬಿಐಗೆ ತಿಳಿದಿದೆ. ಆದಾಗ್ಯೂ, ಸುಳ್ಳು ಅಫಿಡವಿಟ್‌ಗಳನ್ನು ಸಲ್ಲಿಸುವ ಮೂಲಕ ನ್ಯಾಯಾಲಯವನ್ನು ಹಾದಿತಪ್ಪಿಸುತ್ತಿವೆ. ಸುಳ್ಳು ತಪ್ಪೊಪ್ಪಿಗೆಗಳನ್ನು ಪಡೆಯಲು ಏಜೆನ್ಸಿಗಳು ಜನರನ್ನು ಹಿಂಸಿಸುತ್ತಿವೆ ಎಂದು ಅವರು ಆರೋಪಿಸಿದ್ದಾರೆ.

"ನನ್ನ ಹೆಸರು ಮತ್ತು ಸಿಸೋಡಿಯಾ ಹೆಸರನ್ನು ಕೆಡಿಸಲು ಜನರಿಗೆ ಹೇಳಲಾಗುತ್ತಿದೆ. ನಮಗೆ ಪರಿಚಯವಿಲ್ಲದ ಚಂದನ್ ರೆಡ್ಡಿ ಎಂಬಾತಿಗೆ ಚಿತ್ರಹಿಂಸೆ ನೀಡಲಾಗಿದೆ. ಅವನ ಕಿವಿ ಮತ್ತು ಮುಖಕ್ಕೆ ಗಾಯವಾಗಿದೆ ಎಂದು ವೈದ್ಯಕೀಯ ವರದಿ ಹೇಳುತ್ತದೆ. ಥರ್ಡ್ ಡಿಗ್ರಿ ಮೂಲಕ ಮಾನಸಿಕ ಕಿರುಕುಳ, ದೈಹಿಕ ಚಿತ್ರಹಿಂತೆ ನೀಡುವ ಮೂಲಕ ಸುಳ್ಳು ಹೇಳಿಕೆ ಪಡೆಯಲಾಗುತ್ತಿದೆ ಎಂದು ಕೇಜ್ರಿವಾಲ್ ಹೇಳಿದರು.



ಬಿಜೆಪಿ ತೊರೆದು ಕಾಂಗ್ರೆಸ್ ಸೇರಿರುವ ಮಾಜಿ ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ ಅವರು ಇಂದು ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ, ವಿಧಾನ ಪರಿಷತ್ ಸದಸ್ಯ ಪ್ರಕಾಶ್ ರಾಥೋಡ್, ಪಕ್ಷದ ಚಿಕ್ಕೋಡಿ ಜಿಲ್ಲಾಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ ಹಾಜರಿದ್ದರು.

## ಜಗದೀಶ್ ಶೆಟ್ಟರ್ ಗೆ ಟಿಕೆಟ್ ತಪ್ಪಿಸುವ ಕೆಲಸ ಮಾಡುತ್ತಿಲ್ಲ: ಸಿಎಂ

ಹುಬ್ಬಳ್ಳಿ: ರಾಜಕಾರಣಕ್ಕೆ ಬರುವುದಕ್ಕಿಂತ ಮೊದಲಿನಿಂದಲೂ ಜಗದೀಶ್ ಶೆಟ್ಟರ್ ಹಾಗೂ ನಾನು ಸ್ನೇಹಿತರು. ಅವರಿಗೆ ಟಿಕೆಟ್ ತಪ್ಪಿಸುವ ಕೆಲಸ ಮಾಡುತ್ತಿಲ್ಲ. ಅವರ ಬೆಂಬಲಿಗರ ಮಾತಿನಲ್ಲಿ ಹುರುಳಿಲ್ಲ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಶನಿವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಗದೀಶ ಶೆಟ್ಟರ್ ಅವರಿಗೆ ಟಿಕೆಟ್ ಕೊಡಿಸಲು ಸರ್ವ ಪ್ರಯತ್ನ ಮಾಡುತ್ತಿದ್ದೇವೆ. ಈ ವಿಚಾರದಲ್ಲಿ ನಿತ್ಯವೂ ವರಿಷ್ಠರೊಂದಿಗೆ ಸಂಪರ್ಕದಲ್ಲಿದ್ದೇವೆ. ಆದರೆ, ಟಿಕೆಟ್ ತಪ್ಪಿಸಲು ಯತ್ನಿಸಲಾಗುತ್ತಿದೆ ಎಂದು ಹೇಳುವುದರಲ್ಲಿ ಸತ್ಯವಿಲ್ಲ ಎಂದು ಹೇಳಿದರು. ಜಗದೀಶ ಶೆಟ್ಟರ್ ಬಿಜೆಪಿಯ ನಿಷ್ಠಾವಂತ ನಾಯಕರಾಗಿದ್ದು, ಅವರದ್ದು ಜನಸಂಘ ಕಾಲದ ಮನೆತನ. ಉತ್ತರ ಕರ್ನಾಟಕ ಭಾಗಕ್ಕೆ ಅವರು ಅಗತ್ಯವಾಗಿದ್ದು, ಸಕ್ರಿಯ ರಾಜ–ಕಾರಣದಲ್ಲಿ ಉಳಿಸಿಕೊಳ್ಳಬೇಕೆಂದು ವರಿಷ್ಠರೊಂದಿಗೆ ಮಾತನಾಡುತ್ತಿದ್ದೇವೆ ಎಂದು ತಿಳಿಸಿದರು. ನಾನು ನೀರಾವರಿ ಯೋಜನೆಯಲ್ಲಿ ಭ್ರಷ್ಟಾಚಾರ ಮಾಡಿದ್ದರೆ ದಾಖಲೆಗಳನ್ನು ಬಿಡುಗಡೆ ಮಾಡಲಿ. ನೀರಾವರಿ ಯೋಜನೆಯಲ್ಲಿ ನಡೆದ ಹಗರಣದಲ್ಲಿ ನೆಹರು ಓಲೇಕಾರ ಅವರಿಗೆ ಶಿಕ್ಷೆ ಆಗಿದೆ. ಅದನ್ನ ನೆನಪಿಸಿಕೊಳ್ಳಲಿ ಎಂದು ತಿರುಗೇಟು ನೀಡಿದರು.





## ಗ್ರಾಮೀಣ ಮತದಾರರ ಸೆಳೆಯುತ್ತಿರುವ ನಾಗೇಶ ಮನ್ನೊಳ್ಕರ



ಬೆಳಗಾವಿ: ನಗರದಲ್ಲಿ ಗ್ರಾಮೀಣ ಕ್ಷೇತ್ರದ ಬಿಜೆಪಿ ಪಕ್ಷದ ಅಭ್ಯರ್ಥಿಯಾದ ನಾಗೇಶ ಮನ್ನೊಳ್ಕರ ಅವರು ತಮ್ಮ ಕ್ಷೇತ್ರದಲ್ಲಿ ಅಬ್ಬರದ ಪ್ರಚಾರದಲ್ಲಿ ತೊಡಗಿಕೊಂಡಿದ್ದಾರೆ.

ಮಾಜಿ ಸಚಿವ ರಮೇಶ ಜಾರಕಿಹೊಳಿ ಅವರ ಬೆಂಬಲಿತ ಅಭ್ಯರ್ಥಿಯಾದ ನಾಗೇಶ ಮನ್ನೊಳ್ಕರ್ ಅವರು ಗ್ರಾಮೀಣ ಮತಕ್ಷೇತ್ರದ ಪ್ರತಿ ಗ್ರಾಮದಲ್ಲಿಯೂ ಸಂಚರಿಸಿ, ಪ್ರತಿ ಮತದಾರರನ್ನು ಬೇಟಿಯಾಗಿ ಬಿಜೆಪಿ ಪಕ್ಷಕ್ಕೆ ಬೆಂಬಲ ನೀಡುವಂತೆ ಮನವಿ ಮಾಡಿಕೊಂಡಿದ್ದಾರೆ.

ಅದೇ ರೀತಿ ಚುನಾವಣಾ ಟಿಕೆಟ್ ಸಿಕ್ಕ ಹಿನ್ನೆಲೆಯಲ್ಲಿ, ನಿನ್ನೇ *ಬಡಾಲ ಅಂಕಲಗಿ* ಗ್ರಾಮದ ಬೀರಪ್ಪ ದೇವ–ರಿಗೆ ಹರಕೆ ತೀರಿಸಲು ಹೋಗಿ, ಆ ಗ್ರಾಮದ ಜನರನ್ನು ಬೇಟಿಯಾಗಿ ಮತ ಚಲಾಯಿಸುವಂತೆ ಕೇಳಿಕೊಂಡರು..

ಅದೇ ರೀತಿ ಬಾಗೇವಾಡಿಯ ಹಲವು ಪ್ರದೇಶಗಳಲ್ಲಿ ತಿರುಗಾಡಿ, ಬಿಜೆಪಿಗೆ ಮತ ನೀಡುವಂತೆ ಜನರಲ್ಲಿ ಮನವಿ ಮಾಡಿಕೊಂಡರು.

ಈ ಸಂಧರ್ಭದಲ್ಲಿ ಗ್ರಾಮೀಣ ಕ್ಷೇತ್ರದ ಅಭ್ಯರ್ಥಿಯಾದ ನಾಗೇಶ ಮನ್ನೊಳ್ಕರ ಅವರ ಜೊತೆಗೆ ಬೆಂಬಲಿಗರಾದ ಮಹೇಶ ಪೂಲಾರಕೊಪ್ಪ, ಇನ್ನಿತರ ಗ್ರಾಮದ ಮುಖಂಡರು, ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

## ಬಿಜೆಪಿಯಲ್ಲಿ ತತ್ವ ಸಿದ್ಧಾಂತ ಗಾಳಿಗೆ ತೂರುವ ಕಾರ್ಯವಾಗಿದೆ: ಲಕ್ಷ್ಮಣ ಸವದಿ



ಬೆಳಗಾವಿ: ಬಿಜೆಪಿ ಬಿಟ್ಟು ಕಾಂಗ್ರೆಸ್ ಸೇರುವ ವಾತಾವರಣವನ್ನು ಅವರೇ ನಿರ್ಮಾಣ ಮಾಡಿದ್ದಾರೆ. ಬಿಜೆಪಿಯಲ್ಲಿ ತತ್ವ ಸಿದ್ಧಾಂತ ಗಾಳಿಗೆ ತೂರುವ ಕಾರ್ಯ ಆಗಿದೆ ಎಂದು ಮಾಜಿ ಡಿಸಿಎಂ ಲಕ್ಷ್ಮಣ ಸವದಿ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ನಗರದ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಪಚುನಾವಣೆಯಲ್ಲಿ ಬಿಜೆಪಿಯನ್ನು ಗೆಲ್ಲಿಸಬೇಕು. ಬಳಿಕ ಮುಂದಿನ ಅವಧಿಗೆ ಡಿಸಿಎಂ ಮಾಡುವುದಾಗಿ ಹೇಳಿದ್ದರು. ನಾನೇನೂ ಡಿಸಿಎಂ ಸ್ಥಾನ ಕೇಳಿರಲಿಲ್ಲ. ಅಥ–'ವಾ ಮಂತ್ರಿ ಮಾಡಿ ಎಂದು ಕೇಳಿರಲಿಲ್ಲ. ಆದರೆ ಡಿಸಿಎಂ ಸ್ಥಾನದಿಂದ ತಗೆಯುವ ವೇಳೆ ನನ್ನನ್ನು ಒಂದು ಮಾತು ಕೇಳಲಿಲ್ಲ. ನಾನೇನೂ ಭ್ರಷ್ಟಾಚಾರ ಅಥ–'ವಾ ಪಕ್ಷ ವಿರೋಧಿ ಚಟುವಟಿಕೆಯಲ್ಲಿ ಭಾಗಿಯಾಗಿದ್ದೇನಾ? ಎಂದು ಅವರು ಪ್ರಶ್ನಿಸಿದ್ದಾರೆ.

ಉಪಚುನಾವಣೆ ವೇಳೆ ಜವಾಬ್ದಾರಿ ಕೊಟ್ಟಾಗ ಅಭ್ಯರ್ಥಿಗಳ ಗೆಲ್ಲಿಸುವ ಕೆಲಸ ಮಾಡಿದ್ದೆ.

ಈ ವೇಳೆ ಸಾರ್ವತ್ರಿಕ ಚುನಾವಣೆಯಲ್ಲಿ ಸ್ಪರ್ಧೆಗೆ ಅವಕಾಶ ಕೊಡಬೇಕು ಎಂದು ಕೇಳಿದ್ದೆ. ಅಲ್ಲದೆ 17 ಜನರಿಗೆ ಮಾತು ಕೊಟ್ಟಿದ್ದು, ಅವರೆಲ್ಲರಿಗೂ ಟಿಕೆಟ್ ಕೊಡಬೇಕು ಎಂದಿದ್ದರು.

ಆದರೆ ಶಂಕರ್ ಅವರಿಗೆ ಏಕೆ ಟಿಕೆಟ್ ಕೊಡಲಿಲ್ಲ? ಒಂದು ಮಾನದಂಡ ಮಾಡಿದರೆ ಪ್ರಧಾನಿಯಿಂದ ಹಿಡಿದು ಸಾಮಾನ್ಯ ಕಾರ್ಯಕರ್ತರವರೆಗೂ ಒಂದೇ ಇರಬೇಕು. ಅವರ ಬದುಕನ್ನೇ ಬಿಜೆಪಿಗೆ ಮುಡುಪಿಟ್ಟ ಜಗದೀಶ್ ಶೆಟ್ಟರ್‌ಗೆ ಚುನಾವಣೆ ಸ್ಪರ್ಧಿಸಲು ಅವಕಾಶ ನೀಡಿಲ್ಲ ಎಂದು ಗುಡುಗಿದ್ದಾರೆ.

ಅಭಿಮಾನಿಗಳು ನನ್ನನ್ನು ಕರೆದು ಚರ್ಚೆ ಮಾಡಿ ನೀವು ಕೈಗೊಳ್ಳುವ ನಿರ್ಧಾರಕ್ಕೆ ಬದ್ಧ ಎಂದರು. ಅಲ್ಲದೆ ಕಾಂಗ್ರೆಸ್ ಜೊತೆ ಚರ್ಚೆ ಮಾಡಿ, ಇಲ್ಲವೆ ಪಕ್ಷೇತರವಾಗಿ ಸ್ಪರ್ಧಿಸಿ ಎಂದು ಆಯ್ಕೆಯನ್ನು ಕೊಟ್ಟಿದ್ದರು. ಅದರಂತೆ ಕಾಂಗ್ರೆಸ್ಗೆ ಸೇ–ರಿದ್ದೇನೆ ಎಂದು ಹೇಳಿದ್ದಾರೆ.

ನನ್ನ ಕ್ಷೇತ್ರದ ಜನ ಕಷ್ಟ ಕಾಲದಲ್ಲಿ ಸಹಾಯ ಮಾಡಿದ್ದಾರೆ. ಕ್ಷೇತ್ರದ ರೈತರು ಸ್ವಾಭಿಮಾನದಿಂದ ಬದುಕಬೇಕು ಎಂಬ ಸಂಕಲ್ಪ ಇದೆ.

ರೈತರಿಗೆ ನೀಡಲಾದ ಭರವಸೆಗಳನ್ನು ಈಡೇರಿಸುವ ಕೆಲಸ ಮಾಡುತ್ತೇನೆ. ಒಂದೆರಡು ದಿನಗಳಲ್ಲಿ ನನ್ನ ನಾಮಪತ್ರ ಸಲ್ಲಿಸುತ್ತೇನೆ. ಬಿ ಫಾರಂ ಶನಿವಾರ ಸಂಜೆ ಬರಲಿದೆ ಎಂದು ಹೇಳಿದ್ದಾರೆ.

ಲಕ್ಷ್ಮಣ್ ಸವದಿ ದುಡುಕಿದ್ದಾರೆ ಎಂಬ ಸಿಎಂ ಬಸವರಾಜ ಬೊಮ್ಮಾಯಿಯವರಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು, ನಾನು ದುಡುಕಿಲ್ಲ, ನಿಜವಾಗಿ ಬಿಜೆಪಿ ನಾಯಕರು ದುಡುಕಿದ್ದಾರೆ.

ಯಡಿಯೂರಪ್ಪ ಪಕ್ಷ ಬಿಟ್ಟು ಪಕ್ಷಕ್ಕೆ ಬಂದವರು ಅವರು ಬೇರೆಯವ–ರಿಗೆ ಮಾರ್ಗದರ್ಶನ ಮಾಡುವ ಹಕ್ಕಿಲ್ಲ. ಜಗದೀಶ್ ಶೆಟ್ಟರ್ ನಾವು 20–25 ವರ್ಷಗಳಿಂದ ಜೊತೆಗಿದ್ದೇವೆ. ಜಗದೀಶ್ ಶೆಟ್ಟರ್ ಏನು ತಪ್ಪು ಮಾಡಿದ್ದಾರೆ? ಅವ–ರಿಗೆ ಕೇವಲ 67 ವಯಸ್ಸು, ವಯಸ್ಸಿನ ಮಾನದಂಡ ಇದ್ರೆ ಏಕೆ ಟಿಕೆಟ್ ನೀಡುತ್ತಿಲ್ಲ. ಶೆಟ್ಟರ್ ಅಂತವರನ್ನೇ ಬಿಜೆಪಿ ಕಡೆಗಣಿಸಿದೆ ಎಂದು ಅಸಮಧಾನ ವ್ಯಕ್ತಪಡಿಸಿದ್ದಾರೆ.

## ರಾಜ್ಯ ಸರ್ಕಾರದ "ಸರ್ವೋತ್ತಮ ಸೇವಾ ಪ್ರಶಸ್ತಿ"ಗೆ ನಾಮ ನಿರ್ದೇಶನ ಸಲ್ಲಿಸಲು ಅವಧಿ ವಿಸ್ತರಣೆ

ಬೆಳಗಾವಿ: 2022–23 ನೇ ಸಾಲಿನಲ್ಲಿ ರಾಜ್ಯ ಮಟ್ಟ, ಇಲಾಖಾ ಮಟ್ಟ ಮತ್ತು ಜಿಲ್ಲಾ ಮಟ್ಟದ "ಸರ್ವೋತ್ತಮ ಸೇವಾ ಪ್ರಶಸ್ತಿ" ಪಡೆಯಲು ರಾಜ್ಯ ಸರ್ಕಾರದ ಅಧಿಕಾರಿ/ನೌಕರರು ತಮ್ಮ ನಾಮ ನಿರ್ದೇಶನಗಳನ್ನು ಆನ್ ಲೈನ್ ಮೂಲಕ ಸಲ್ಲಿಸಲು ಮೇ.15 2023 ರ ವರೆಗೆ ವಿಸ್ತರಿಸಲಾಗಿದೆ.

ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ತಮ್ಮ ಕಾರ್ಯಾಲಯ ಹಾಗೂ ತಮ್ಮ ಅಧೀನ ಕಾರ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ನಾಮ ನಿರ್ದೇಶನ ಸಲ್ಲಿಸಲು ತಿಳಿಸುವುದು.

ಆನ್‌ಲೈನ್‌ನಲ್ಲಿ ನಾಮ ನಿರ್ದೇಶನ ಸಲ್ಲಿಸಲು ಮತ್ತು ಹೆಚ್ಚಿನ ಮಾಹಿತಿಗಾಗಿ ಜಾಲತಾಣ http://sarvothamaawards.karnataka.gov.in/ & http://dparar.karnataka.gov.in/ ಗೆ ಸಂಪರ್ಕಿಸಬಹುದು.

ಜಾಲತಾಣದಲ್ಲಿ ಮಾಹಿತಿ/ವಿವರಗಳನ್ನು ದಾಖಲಿಸಲು ಯಾವುದೇ ರೀತಿಯ ಅಡಚಣೆ/ಸಂದೇಹ ಉಂಟಾದಲ್ಲಿ ಹೆಚ್ಚಿನ ಮಾಹಿತಿಗಾಗಿ ಶರತ್ ದೂ.ಸಂ 080–22230060 ಈ Helpdesk ಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ಜಿಲ್ಲಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದುರಸ್ಥಿ ಕಾರ್ಯದ ಕಾರಣ ನಗರದ ವಿವಿಧೆಡೆ ನೀರು ಸರಬರಾಜು ಮಾಡುವ ಷೆಡ್ಯೂಲ್‌ನಲ್ಲಿ ವ್ಯತ್ಯಯ

ಬೆಳಗಾವಿ: ಹಿಡಕಲ ಕಚ್ಚಾ ನೀರು ಸರಬರಾಜಿನ 1000 ಎಮ್.ಎಮ್. ಒಖ ಮುಖ್ಯ ಕೊಳವೆಯು ಖನಗಾವ ಹತ್ತಿರ ಗಣನೀಯ ಪ್ರಮಾಣದಲ್ಲಿ ಸೋರಿಕೆ ಉಂಟಾಗಿದ್ದು, ಏ.15 2023 ರಂದು ತುರ್ತಾಗಿ ದುರಸ್ಥಿ ಕಾರ್ಯ ಕೈಗೊಳ್ಳಲಾಗುವುದು.

ಪ್ರಸ್ತುತ ಇರುವ ನೀರು ಸರಬರಾಜು ಷೆಡ್ಯೂಲ್ ಏ.15 2023 & ಏ.16 2023 ರವರೆಗೆ ಮುಂದುವರಿಯುತ್ತದೆ. ಎರಡು ದಿನಗಳ ಕಾಲ ಬೆಳಗಾವಿ ನಗರದ ದಕ್ಷಿಣ ಪ್ರದೇಶಗಳಾದ: ಮಜಗಾಂವ್, ನಾನವಾಡಿ, ಚಿದಂಬರ್ ನಗರ, ಶಹಾಪುರ, ವಡಗಾಂವ್, ಹಳೇ ಬೆಳಗಾವಿ ಹಾಗೂ ಉತ್ತರ–ಪ್ರದೇಶಗಳಾದ: ಸಹ್ಯಾದ್ರಿ ನಗರ, ಕುವೆಂಪು ನಗರ, ಟಿವಿ ಕೇಂದ್ರ, ಸದಾಶಿವ ನಗರ, ಬಸವ ಕಾಲೋನಿ, ಕಲ್ಮೇಶ್ವರ ನಗರ, ಸುಭಾಸ್ ನಗರ, ಅಶೋಕ್ ನಗರ, ಎಂಎಂ ಬಡಾವಣೆ ಏರಿಯಾ, ಹೊಸ ಗಾಂಧಿ ನಗರ, ಕಣಬರ್ಗಿ, ಕುಡಚಿ ಹಾಗೂ ಸುಭಾಷ್ ನಗರ, ವೀರಭದ್ರ ನಗರ, ಅಲರವಾಡ ಎಂಇಎಸ್ ಕಂಟೋನ್ಮೆಂಟ್ ಮತ್ತು ಸೈನಿಕ ನಗರ ಹಾಗೂ ಕಂಟೋನ್ಮೆಂಟ್ ಪ್ರದೇಶ, ಹಿಂಡಾಲ್ಕೊ ಕಾರ್ಖಾನೆ,. ಕೆಎಐಡಿಬಿ ಕೈಗಾರಿಕಾ ಪ್ರದೇಶ, ಎನ್–ರೂಟ್ ವಿಲೇಜ್ ಟ್ಯಾಪಿಂಗ್ಸ್, ಡಿಫೈಯನ್ಸ್ ಏರಿಯಾ, ಸೈನಿಕ್ ನಗರ, ಕೆಎಲ್ಇ ಆಸ್ಪತ್ರೆ, ಬಿಮ್ಸ್ ಆಸ್ಪತ್ರೆ. ಆರ್.ಸಿ ನಗರ ಹಾಗೂ ಎಲ್ಲಾ ಸಗಟು ನೀರು ಪೂರೈಕೆ ಸಹಿತ ನೀರು ಸರಬರಾಜು ಮಾಡುವ ಷೆಡ್ಯೂಲ್‌ನಲ್ಲಿ ವ್ಯತ್ಯಯ ಉಂಟಾಗುವುದು ಆದ್ದ ರಿಂದ ಸಾರ್ವಜನಿಕರು ಮೇ॥. ಎಲ್ & ಟಿ ಯೊಂದಿಗೆ ಸಹಕರಿಸಬೇಕು ಎಂದು ಯೋ.ಅ.ಫ, ಕುಸ್ಸೆಂಪ್–ಕೆ.ಯು.ಐ.ಡಿ.ಎಫ್.ಸಿ, ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಡಿಯುವ ನೀರಿನ ಅಭಾವ: ಮಹಾರಾಷ್ಟ್ರದಿಂದ 6 ಟಿಎಂಸಿ ನೀರು ಬಿಡುಗಡೆಗೆ ಸರ್ಕಾರ ಮನವಿ

ಬೆಳಗಾವಿ: ಬೆಳಗಾವಿ, ಕಲಬುರ್ಗಿ ಸೇ–ರಿದಂತೆ ಉತ್ತರ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಮೇ ಮಾಹೆಯಲ್ಲಿ ಕುಡಿಯುವ ನೀರಿನ ತೀವ್ರ ಅಭಾವ ಉಂಟಾಗಲಿರುವುದ–ರಿಂದ ಜನರು ಮತ್ತು ಜಾನುವಾರುಗಳಿಗೆ ಕುಡಿಯುವ ನೀರು ಪೂರೈಸಲು ಕೃಷ್ಣಾ ಹಾಗೂ ಭೀಮಾ ನದಿಗಳಿಗೆ ತಲಾ ಮೂರು ಟಿಎಂಸಿ ನೀರು ಬಿಡುಗಡೆ ಮಾಡಬೇಕು ಎಂದು ರಾಜ್ಯ ಸರ್ಕಾರವು ಮಹಾರಾಷ್ಟ್ರ ಸರಕಾರಕ್ಕೆ ಮನವಿ ಮಾಡಿರುತ್ತದೆ.

ಈ ಕುರಿತು ಕರ್ನಾಟಕದ ಜಲಸಂಪನ್ಮೂಲ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ರಾಕೇಶ್ ಅಇಂಗ್ ಅವರು, ಮಹಾರಾಷ್ಟ್ರದ ಜಲಸಂಪನ್ಮೂಲ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಏ.15 ರಂದು ಪತ್ರವನ್ನು ಬರೆದಿರುತ್ತಾರೆ.

ಉತ್ತರ ಕರ್ನಾಟಕದ ಬೆಳಗಾವಿ, ವಿಜಯಪುರ, ಬಾಗಲಕೋಟೆ, ಕಲಬುರ್ಗಿ, ರಾಯಚೂರು, ಯಾದಗಿರಿ ಜಿಲ್ಲೆಗಳಲ್ಲಿ ಬೇಸಿಗೆಯ ಆರಂಭದಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗಿದೆ. ರಾಜ್ಯದ ಹಿಪ್ಪರಗಿ ಬ್ಯಾರೇಜಿನಲ್ಲಿ ನೀರಿನ ಸಂಗ್ರಹ ಕಡಿಮೆ ಇರುತ್ತದೆ.

ಆದ್ದರಿಂದ ಜನರು ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಅಭಾವ ತಪ್ಪಿಸಲು ಮಹಾರಾಷ್ಟ್ರ ರಾಜ್ಯದ ವಾರಣಾ/ಕೊಯ್ನಾ ಜಲಾಶಯಗಳಿಂದ 3 ಟಿಎಂಸಿ ಹೆಚ್ಚುವರಿಯಾಗಿ ಕೃಷ್ಣಾ ನದಿಗೆ ಬಿಡುಗಡೆಗೊಳಿಸಬೇಕು.

ಅದೇ ರೀತಿ ಮಹಾರಾಷ್ಟ್ರದ ಉಜ್ಜನಿ ಜಲಾಶಯದಿಂದ ಭೀಮಾ ನದಿಗೆ 3 ಟಿಎಂಸಿ ನೀರು ಬಿಡುಗಡೆ ಮಾಡಬೇಕು.

ಹೀಗೆ ಮೇ ಮತ್ತು ಜೂನ್ ಮಾಹೆಯಲ್ಲಿ ಜನರು ಮತ್ತು ಜಾನುವಾರುಗಳ ಕುಡಿಯುವ ನೀರು ಒದಗಿಸಲು ಮಾನವೀಯತೆ ದೃಷ್ಟಿಯಿಂದ ಒಟ್ಟಾರೆ ಆರು ಟಿಎಂಸಿ ನೀರು ಬಿಡುಗಡೆ ಮಾಡಬೇಕು ಎಂದು ರಾಕೇಶ್ ಸಿಂಗ್ ಅವರು ಪತ್ರದಲ್ಲಿ ವಿನಂತಿಸಿದ್ದಾರೆ.

# ಕೆಆರ್‌ಪಿಪಿ ವತಿಯಿಂದ ಸಾರ್ವಜನಿಕ ಸಂಪರ್ಕ ಕೇಂದ್ರ ಅದ್ದೂರಿ ಆರಂಭ



ಕೊಪ್ಪಳ: ಕೊಪ್ಪಳ ಜಿಲ್ಲೆಯ ಗಂಗಾವತಿಯಲ್ಲಿ ಶನಿವಾರ ಮುಂಜಾನೆ ನಗರದ ಕನಕಗಿರಿ ರಸ್ತೆಯಲ್ಲಿರುವ ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಕೇಂದ್ರ ಕಚೇ–ರಿಯಲ್ಲಿ ಜನಸಾಮಾನ್ಯರಿಗೆ ಪಕ್ಷದ ಮಾಹಿತಿಗಾಗಿ ಸಾರ್ವಜನಿಕ ಸಂಪರ್ಕ ಕಚೇರಿಯನ್ನು ಪಕ್ಷದ ರಾಜ್ಯ ಯುವ ಘಟಕದ ಅಧ್ಯಕ್ಷರಾದ ಭೀಮಾಶಂಕರ ಪಾಟೀಲ್ ಉದ್ಘಾಟಿಸಿದರು.

ನಂತರ ಭೀಮಾಶಂಕರ ಪಾಟೀಲ್ ಮಾತನಾಡಿ, ಕೇವಲ ನಾಲ್ಕು ತಿಂಗಳ ಹಿಂದೆಯಷ್ಟೆ ನೂತನ ಕಲ್ಯಾಣ ರಾಜ್ಯ ಪ್ರಗತಿ ಪಕ್ಷವನ್ನು ಹುಟ್ಟು ಹಾಕುವ ಮೂಲಕ ಗಾಲಿ ಜನಾರ್ಧನ ರೆಡ್ಡಿಯವರು ರಾಜ್ಯಾದ್ಯಂತ ಸಂಚಲನ ಮೂಡಿಸಿದ್ದಾರೆ. ಕಲ್ಯಾಣ ರಾಜ್ಯ ಪ್ರಗತಿ ಪಕ್ಷವು ಅತಿ ಕಡಿಮೆ ಸಮಯದಲ್ಲಿ ಪಕ್ಷದ ಹೆಸರು ರಾಜ್ಯ, ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಂಡಿದೆ. ಪಕ್ಷದ ವಿಚಾರಧಾರೆಗಳನ್ನು ಮತ್ತು ನಿಲುವುಗಳನ್ನು ಒಪ್ಪಿಕೊಂಡು ದಿನದಿಂದ ದಿನಕ್ಕೆ ಸಾವಿರಾರು ಜನರು ಸ್ವ ಇಚ್ಚೆ ಪಕ್ಷ ಸೇರ್ಪಡೆಯಾಗುತ್ತಿದ್ದಾರೆ.

ಗಂಗಾವತಿ ಕೇಂದ್ರ ಕಚೇರಿಯಿಂದಲೇ ಇಡೀ ರಾಜ್ಯಕ್ಕೆ ಪಕ್ಷದ ಚಟುವಟಿಕೆಗಳನ್ನು ನಡೆಯುತ್ತಿವೆ. ಇದಕ್ಕೆ ಪೂರಕವಾಗಿ ರಾಜ್ಯದಿಂದ ಗಂಗಾವತಿಗೆ ಬರುವಂತಹ ಸಾವಿರಾರು ಅಭಿಮಾನಿಗಳು ಅಗಮಿಸುತ್ತಿದ್ದು ಅವರ ಅವಶ್ಯಕತೆಗಳು ಹಾಗೂ ಸಾಮಾನ್ಯರ ಕುಂದುಕೊರತೆಗಳಿಗೆ ಸ್ಪಂದನೆ ನೀಡಲು ಮತ್ತು ಪಕ್ಷದ ಚಟುವಟಿ–ಕೆಗಳ ಮಾಹಿತಿ ನೀಡಲು ಚಾಲನೆ ನೀಡಲಾಗಿದೆ ಎಂದರು. ಸಂಪರ್ಕ ಕೇಂದ್ರ ಕಚೇರಿಯನ್ನು ಸಂಪರ್ಕಿಸುವ ದೂರವಾಣಿ ಸಂಖ್ಯೆ 6366812104/6366812105.ಈ ಸಂದರ್ಭದಲ್ಲಿ ಗಂಗಾವತಿ ಸೋಮವಂಶಿಯ ಕ್ಷತ್ರಿಯ ಸಮಾಜದ ಹಿರಿಯ ಮುಖಂಡ ಧಲಭಂಜನ್, ಗ್ರಾಮೀಣ ಘಟಕದ ಉಪಾಧ್ಯಕ್ಷ ಆನಂದಗೌಡ, ಹಿಂದುಳಿದ ವರ್ಗದ ನಗರ ಘಟಕ ಅಧ್ಯಕ್ಷ, ಕಾರ್ಯದರ್ಶಿಗಳಾದ ಪ್ರಸಾದ ಹಟ್ಟಿ, ಬಸವರಾಜ್ ಮಾಂತಗೊಂಡ ಸಂತೋಷ್ ದಾಸನಾಳ್ ಮತ್ತು ಪಕ್ಷದ ಹಿರಿಯ ಮುಖಂಡರು ಮತ್ತು ಕಚೇರಿ ಸಿಬ್ಬಂದಿ ಉಪಸ್ಥಿತರಿದ್ದರು.

# ಕಾಂಗ್ರೆಸ್ ಬಳ್ಳಾರಿ ನಗರ ಕ್ಷೇತ್ರಕ್ಕೆ 'ನಾರಾ ಭರತ್‌ರೆಡ್ಡಿ' ಹೆಸರು ಘೋಷಣೆ



ಬಳ್ಳಾರಿ: ಅಖಂಡ ಬಳ್ಳಾರಿ ಜಿಲ್ಲೆಯಲ್ಲಿ ತೀವ್ರ ಕುತೂಹಲ ಮತ್ತು ಚರ್ಚೆಗೆ ಒಳಗಾಗಿದ್ದ ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನಾಗಿ ಮಾಜಿ ಶಾಸಕ ನಾರಾ ಸೂರ್ಯ ನಾರಾಯಣರೆಡ್ಡಿರವರ ಪುತ್ರ ಜಿಪಂನ ಕಲ್ಲಗುಂದಿ ಕ್ಷೇತ್ರದ ಮಾಜಿ ಸದಸ್ಯ ನಾರಾ ಭರತ್‌ರೆಡ್ಡಿಗೆ ಕಾಂಗ್ರೆಸ್ ಪಕ್ಷ ಶನಿವಾರದಂದು ಅಧಿಕೃತವಾಗಿ ಘೋಷಣೆ ಮಾಡಿದೆ.

ಬಳ್ಳಾರಿ ನಗರ ಕ್ಷೇತ್ರಕ್ಕೆ ಸ್ಪರ್ಧಿಸಲು ಬಯಸಿ 17ಕ್ಕೂ ಹೆಚ್ಚು ಹು–ರಿಯಾಳುಗಳು ಪಕ್ಷಕ್ಕೆ ಅರ್ಜಿಯನ್ನು ಸಲ್ಲಿಸಿದ್ದರು. ಅದರಲ್ಲಿ ಮಾಜಿ ಸಚಿವ ಎಂ.ದಿವಾಕರ್‌ಬಾಬು, ಮಾಜಿ ಸಂಸದ ಅನಿಲ್ ಲಾಡ್, ಬುಡಾದ ಮಾಜಿ ಅಧ್ಯಕ್ಷ ಜೆ.ಎಸ್. ಆಂಜನೇಯಲು ಹಾಗೂ ಟಚ್ ಫಾರ್ ಲೈಫ್ ಫೌಂಡೇಷನ್‌ನ ಸಂಸ್ಥಾಪಕ ಅಧ್ಯಕ್ಷ ಹಾಗೂ ಬಳ್ಳಾರಿ ಜಿಪಂನ ಕಲ್ಲಗುಂದಿ ಕ್ಷೇತ್ರದ ಮಾಜಿ ಸದಸ್ಯ ನಾರಾ ಭರತ್‌ರೆಡ್ಡಿಯವರ ನಡುವೆ ತೀವ್ರ ಪೈಪೋಟಿ ನಡೆದಿತ್ತು.

ಅಖಂಡ ಬಳ್ಳಾರಿ ಜಿಲ್ಲೆಯಲ್ಲಿ ತೀವ್ರ ಕುತೂಹಲ ಕೆರಳಿಸಿದ್ದ ಬಳ್ಳಾರಿ ನಗರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಯಾರಾಗ್ತಾರೇ? ಎಂಬ ಚರ್ಚೆಗಳು ಕಾಂಗ್ರೆಸ್ ಸೇರಿದಂತೆ ವಿವಿಧ ಪಕ್ಷಗಳಲ್ಲಿ ನಡೆದಿದ್ದವು.

ಉದ್ಯಮಿಗಳು ಹಾಗೂ ಕೆಪಿಸಿಸಿಯ ಮಾಜಿ ಉಪಾಧ್ಯಕ್ಷರೂ ಆದ ನಾರಾ ಸೂರ್ಯ ನಾರಾಯಣಯಿ ರೆಡ್ಡಿಯವರ ಬೆಂಬಲಿಗರು ಮತ್ತು ಯುವ ಆಶಾಕಿರಣವಾಗಿ ಹೊರಹೊಮ್ಮಿರುವ ನಾರಾ ಭರತ್‌ರೆಡ್ಡಿಯವರ ಬೆಂಬಲಿಗರಲ್ಲಿ ತೀವ್ರ ಕಾತುರಕ್ಕೆ ಕಾರಣವಾಗಿದ್ದ ಬಳ್ಳಾರಿ ನಗರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯನ್ನಾಗಿ ಯಾರನ್ನು ಪಕ್ಷ ಘೋಷಣೆ ಮಾಡುತ್ತದೆ ಎಂಬ ನಿರೀಕ್ಷೆ ಇತ್ತು. ಇವೆಲ್ಲವಕ್ಕೂ ಫುಲ್ ಸ್ಟಾಪ್ ಇಟ್ಟಿರುವ ಪಕ್ಷವು ಶನಿವಾರ ಮಧ್ಯಾಹ್ನ ಸುಮಾರಿಗೆ ನಾರಾ ಭರತ್‌ರೆಡ್ಡಿಯವರನ್ನು ಅಧಿಕೃತ ಅಭ್ಯರ್ಥಿಯೆಂದು ಘೋಷಿಸಿದೆ. ನಾರಾ ಭರತ್‌ರೆಡ್ಡಿ ಮತ್ತು ನಾರಾ ಸೂರ್ಯ ನಾರಾಯಣರೆಡ್ಡಿ ಬೆಂಬಲಿಗರು ನಗರದ ವಿವಿಧೆಡೆ ಪಟಾಕಿಗಳನ್ನು ಸಿಡಿಸಿ, ಸಿಹಿಹಂಚಿ ಸಂಭ್ರಮಿಸಿದರು.

## ಇಂದು ಕೆಆರ್‌ಪಿ ಪಕ್ಷದಿಂದ ಬಳ್ಳಾರಿ ನಗರ ಅಭ್ಯರ್ಥಿ ಲಕ್ಷ್ಮಿ ಅರುಣ ನಾಮಪತ್ರ ಸಲ್ಲಿಕೆ



ಬಳ್ಳಾರಿ: ಬಳ್ಳಾರಿ ನಗರ ಕ್ಷೇತ್ರದ ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಅಭ್ಯರ್ಥಿಯಾಗಿ ಗಾಲಿ ಲಕ್ಷ್ಮೀ ಅರುಣ ಜನಾರ್ಧನರೆಡ್ಡಿ ಅವರು ನಾಳೆ ನಾಮಪತ್ರ ಸಲ್ಲಿಸಲಿದ್ದಾರೆಂದು ಪಕ್ಷದ ವಕ್ತಾರ ಸಂಜಯ್ ಬೆಟಗೇರಿ ತಿಳಿಸಿದ್ದಾರೆ.

ಅಂದು ಬೆಳಿಗ್ಗೆ ನಗರದ ಪ್ರತಿ ಬೂತ್ ಮಟ್ಟದ ಕಾರ್ಯಕರ್ತರು ವೀರನಗೌಡ ಕಾಲೋನಿಯಲ್ಲಿನ ಪಕ್ಷದ ಕಚೇರಿಯಿಂದ ಲಕ್ಷ್ಮೀ ಅರುಣ ಅವರು ಮೆರವಣಿಗೆ ಮೂಲಕ ದುರ್ಗಮ್ಮ ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿ ಬಳಿಕನಾಮ ಪತ್ರ ಸಲ್ಲಿಸಲಿದ್ದಾರೆ.

ನಾಮ ಪತ್ರ ವೇಳೆಯೇ ಪಕ್ಷದ ಬಲ ಪ್ರದರ್ಶನಕ್ಕೆ ಸಕಲ ರೀತಿಯಲ್ಲಿ ಸಿದ್ದತೆಗಳನ್ನು ಮಾಡಲಾಗು ತ್ತಿದೆಯಂದು ತಿಳಿದುಬಂದಿದೆ.

## ಡಾ.ಬಿ.ಅರ್.ಅಂಬೇಡ್ಕರ್ ಅವರ 132ನೆಯ ಜಯಂತಿ ಆಚರಣೆ



ಬಳ್ಳಾರಿ: ಸಂವಿಧಾನ ಶಿಲ್ಪಿ ಡಾ.ಬಿ.ಅರ್.ಅಂಬೇಡ್ಕರ್ ಅವರ 132ನೆಯ ಜನ್ಮದಿನದ ನಿಮಿತ್ತ ಶುಕ್ರವಾರ ನಗರದ ಸಮಾಜ ಕಲ್ಯಾಣ ಇಲಾಖೆ ಆವರಣದಲ್ಲಿನ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು.

ಕೆಪಿಸಿಸಿ ಮಾಧ್ಯಮ ವಕ್ತಾರ ವೆಂಕಟೇಶ್ ಹೆಗಡೆ, ಯರುಕುಲ ಸ್ವಾಮಿ, ಚಿದಾನಂದ, ಸೋಮಶೇಖರ್, ಕವಯತ್ರಿ ಎಂ. ಡಿ. ವೆಂಕಟಮ್ಮ, ಮಲ್ಲೇಶ್ವರಿ, ಗೋವಿಂದ, ಆನಂದ್, ರಾಜು, ಮುಂತಾದವರು ಉಪಸ್ಥಿತರಿದ್ದರು.

# ಬಿಜೆಪಿ–ಕಂಪ್ಲಿ ವಿಧಾನಸಭಾ ಕ್ಷೇತ್ರಕ್ಕೆ ನಾಮಪತ್ರ ಸಲ್ಲಿಸಿದ ಸುರೇಶ್‌ಬಾಬು



ಕಂಪ್ಲಿ: ಬಳ್ಳಾರಿ ಜಿಲ್ಲೆಯ ಕಂಪ್ಲಿಯಲ್ಲಿ ಸಹಸ್ರಾರು ಜನರ ಹಾಗೂ ಕಾರ್ಯಕರ್ತರೊಂದಿಗೆ ಅದ್ದೂರಿಯಾಗಿ ಮೆರವಣಿಗೆ ನಡೆಸಿದ ನಂತರ ಪಟ್ಟಣದ ಪುರಸಭೆ ಕಚೇರಿಯ ಚುನಾವಣಾಧಿಕಾ–ರಿಗಳ ಕಾರ್ಯಾಲಯದಲ್ಲಿ ಕಂಪ್ಲಿ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧೆಗೆ ಬಿಜೆಪಿ ಪಕ್ಷದ ಅಭ್ಯರ್ಥಿ ಟಿ. ಎಚ್.ಸುರೇಶ್ ಬಾಬು ಅವರು ಚುನಾವಣಾಧಿಕಾರಿ ಡಾ॥ನಯನ ಅವರಿಗೆ ಶನಿವಾರ ನಾಮಪತ್ರ ಸಲ್ಲಿಸಿದರು.

ಇಲ್ಲಿನ ಅಂಬೇಡ್ಕರ್ ವೃತ್ತದಿಂದ ಕಾರ್ಯಕರ್ತರು ಸಚಿವ ಬಿ.ಶ್ರೀರಾಮುಲು ಹಾಗೂ ಅಭ್ಯರ್ಥಿ ಸುರೇಶ್ ಬಾಬು ಅವರಿಗೆ ಹೂವಿನ ಮಳೆ ಗರಿಯುವ ಜತೆಗೆ ಹೊಸ ಬಸ್ ನಿಲ್ದಾಣದ ಮುದ್ದಾಪುರ ಅಗಸಿ ಮಾರ್ಗ ಮುಖಾಂತರ ತೆರೆದ ವಾಹನದಲ್ಲಿ ಮೆರವಣಿಗೆ ಮೂಲಕ ಕರೆದೊಯ್ದು, ತದನಂತರ ಉದ್ಭವ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಎತ್ತಿನ ಬಂಡಿಂ–ುಲ್ಲಿ ಮುಖಂಡರ ಹಾಗೂ ಸಾಕಷ್ಟು ಬೆಂಬಲಿಗರೊಂದಿಗೆ ವಿವಿಧ ಕಲಾ ಪ್ರಕಾರಗಳು ಹಾಗೂ ಹರ್ಷೋದ್ಗಾರದೊಂದಿಗೆ ಮೆರವಣಿಗೆ ಮೂಲಕ ಇಲ್ಲಿನ ಪುರಸಭೆಯ ಚುನಾವಣಾಧಿಕಾರಿಗಳ ಕಛೇರಿಗೆ ಆಗಮಿಸಿ, ನಾಮಪತ್ರ ಸಲ್ಲಿಸಿದರು.

ದೀಪಾ ಅವರ ಪತಿ ಸುರೇಶ್‌ಬಾಬು ಅವರಿಗೆ ನಾಮಪತ್ರ ಸಲ್ಲಿಕೆಯ ಮುಂಚಿತವಾಗಿ ಗುಟ್ಟು ಹೇಳುವ ಜತೆಗೆ ಶ್ರೀರಾಮ ಶ್ರೀರಾಮ ಎನ್ನುವ ಚೀಟಿಯನ್ನು ನೀಡಿದರು.

ಮತ್ತು ತಾಯಿಯ ಆಶೀರ್ವಾದ ಪಡೆದು, ನಂತರ ನಾಮಪತ್ರ ಸಲ್ಲಿಸಿದರು.

ಮೊದಲಿಗೆ ಸಲ್ಲಿಸಿದ ನಾಮಪತ್ರದಲ್ಲಿ ಸೂಚಕರಾಗಿ ಗುಬಾಜಿ ಪಂಪಾಪತಿ ಹಾಗೂ ಎರಡನೇ ಸಲ ಸಲ್ಲಿಸಿದ ನಾಮಪತ್ರದಲ್ಲಿ ಸೂಚಕರಾಗಿ ಪಿ.ಬ್ರಹ್ಮಯ್ಯ ಇದ್ದರು.

ಈ ಸಂದರ್ಭದಲ್ಲಿ ಮಾಜಿ ಸಂಸದೆ ಜೆ.ಶಾಂತಾ, ಸುರೇಶ್ ಬಾಬು ಅವರ ಧರ್ಮಪತ್ನಿ ದೀಪಾ, ಕರ್ನಾಟಕ ರಾಜ್ಯ ಜವಳಿ ನಿಗಮ ಅಧ್ಯಕ್ಷ ಗುತ್ತಿಗೆನೂರು ವಿರೂಪಾಕ್ಷಪ್ಪ, ಜಿಲ್ಲಾಧ್ಯಕ್ಷ ಮುರಾಹರಿಗೌಡ, ಕಂಪ್ಲಿ ಮಂಡಲ ಅಧ್ಯಕ್ಷ ಅಳ್ಳಳ್ಳಿ ವಿರೇಶ, ಮುಖಂಡರಾದ ಕೆ.ಎ.ರಾಮಲಿಂಗಪ್ಪ, ರ್ರಂಗಳ್ಳಿ ತಿಮ್ಮಾರೆಡ್ಡಿ, ಡಾ.ವಿ. ಎಲ್.ಬಾಬು, ಬಿ.ಸಿದ್ದಪ್ಪ, ವಿದ್ಯಾಧರ ಸೇರಿದಂತೆ ಅನೇಕರಿದ್ದರು. ಚುನಾವಣೆ ಹಿನ್ನಲೆ ನೂರು ಮೀಟರ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಓಡಾಟ ನಿಷೇಧಿಸಿತ್ತು. ನಿಷೇಧಿದ ಪ್ರದೇಶದ ಒಳಗೆ ಬಾರದಂತೆ ಮಿಲಿಟರಿ ಹಾಗೂ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು.

# ಭೀಕರ ರಸ್ತೆ ಅಪಘಾತ: ನಾಲ್ವರು ಸ್ಥಳದಲ್ಲೇ ಸಾವು



ತುಮಕೂರು: ತುಮಕೂ–ರಿನ ಹಿರೇಹಳ್ಳಿ ಬಳಿಯ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಖಾಸಗಿ ಬಸ್ ಹಾಗೂ ಇನ್ನೋವಾ ಕಾರು ನಡುವೆ ಈ ಭೀಕರ ಅಪಘಾತ ಸಂಭವಿಸಿ ನಾಲ್ವರು ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ.

ತುಮಕೂರು ಕಡೆಯಿಂದ ಬೆಂಗಳೂರು ಕಡೆಗೆ ಹೋಗುತ್ತಿದ್ದ ಇನ್ನೋವಾ ಕಾರು ಹಾಗೂ ಬೆಂಗಳೂರು ಕಡೆಯಿಂದ ಶಿರಾ ಕಡೆಗೆ ತೆರಳುತ್ತಿದ್ದ ಖಾಸಗಿ ಬಸ್ ಡಿಕ್ಕಿ ಹೊಡೆದಿದೆ.

ಅಪಘಾತದ ತೀವ್ರತೆಗೆ ಕಾರು ಸಂಪೂರ್ಣ ಜಖಂಗೊಂಡಿದ್ದು, ಕಾ–ರಿನಲ್ಲಿದ್ದ ನಾಲ್ವರು ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ.

ಮೃತ ದೇಹಗಳನ್ನು ತುಮಕೂರು ಜಿಲ್ಲಾಸ್ಪತ್ರೆಯ ಶವಗಾರಕ್ಕೆ ರವಾನೆ ಮಾಡಲಾಗಿದೆ. ಇನ್ನೂ ಗಾಯಳುಗಳಿಗೆ ತುಮಕೂರು ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಸ್ಥಳಕ್ಕೆ ಕ್ಯಾತಸಂದ್ರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ಅಲೆಮಾರಿ ಸಮಾಜದ ಮುಖಂಡರು ಬಿ.ಎಂ ಮಾರಪ್ಪ ಶಾಸಕ ಬಿ.ನಾಗೇಂದ್ರ ಅವರು ಸಮ್ಮುಖದಲ್ಲಿ ಕೈಗೆ ಸೇರ್ಪಡೆ



ಬಳ್ಳಾರಿ: ಅಲೆಮಾರಿ ಸಮಾಜದ ಮುಖಂಡರು ಹಾಗೂ ನಮ್ಮ ಕರ್ನಾಟಕ ರಕ್ಷಣಾ ವೇದಿಕೆಯ (ಯುವಸೈನ್ಯ) ಬಳ್ಳಾರಿ ಜಿಲ್ಲಾಧ್ಯಕ್ಷರಾದ ಬಿ.ಎಂ ಮಾರಪ್ಪ ಅವರು ತಮ್ಮ ಅಪಾರ ಬೆಂಬಲಿಗರೊಂದಿಗೆ ಬಿಜೆಪಿ ಪಕ್ಷವನ್ನು ತೊರೆದು ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರ ಸಮ್ಮುಖದಲ್ಲಿ ಶನಿವಾರ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

ನಂತರ ಮಾತನಾಡಿದ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಬಿ.ಎಂ ಮಾರಪ್ಪ ಅವರು ಅಪಾರ ಬೆಂಬಲಿಗರೊಂದಿಗೆ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿರುವುದು ಸಂತಸ ಮೂಡಿಸಿದೆ. ಈ ಭಾಗದಲ್ಲಿ ನಮಗೆ ಮತ್ತಷ್ಟು ಶಕ್ತಿ ಬಂದಂತಾಗಿದೆ. ಅಭಿವೃದ್ಧಿ ನಿರೀಕ್ಷಿಸಿ ಪ್ರತಿ ಯೋಬ್ಬರೂ ಕಾಂಗ್ರೆಸ್ ಬೆಂಬಲಿಸಿ ಆರ್ಶಿವಾದಿಸಿ, ಅವದಿಯಲ್ಲಿ ಕ್ಷೇತ್ರದ ಅಭಿವೃದ್ಧಿಯೇ ಬದಲಾಗಲಿದೆ.

ಎಲ್ಲರಂತೆ ಸುಳ್ಳು ಹೇಳುವ ಜಾಯಮಾನ ನನ್ನದಲ್ಲ, ಮಾತುಕೊಟ್ಟರೆ ಹಿಂಜ–ರಿಯುವ ಮಾತೇ ಇಲ್ಲ, ಬಿಜೆಪಿ ಸೇರಿದಂತೆ ಇತರೇ ಪಕ್ಷದವರ ಸುಳ್ಳು ಭರವಸೆಗಳಿಗೆ, ನಾನಾ ಅಮೀಷಗಳಿಗೆ ಜನರು ಮರುಳಾಗದೇ ಅಭಿವೃದ್ಧಿ ನಿರೀಕ್ಷಿಸಿ ಪ್ರತಿಯೋಬ್ಬರೂ ಕಾಂಗ್ರೆಸ್ ಬೆಂಬಲಿಸಿ, ನಿಮ್ಮೊಂದಿಗೆ ನಾನಿರುವೆ, ಅವದಿಯಲ್ಲಿ ಕ್ಷೇತ್ರದ ಅಭಿವೃದ್ಧಿ ಚಿತ್ರಣವೇ ಬದಲಾಗಲಿದೆ, ಇದು ಭರವಸೆಯಲ್ಲ ನುಡಿದಂತೆ ನಡೆಯುವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಹಾ ನಗರ ಪಾಲಿಕೆ ಸದಸ್ಯರಾದ ರಾಮಾಂಜನೇಯಲು , ಕಮಲೆ ಸೂರಿ, ಗುಮ್ಮನೂರು ಜಗನ್ನಾಥ್, ಬಿ.ಆರ್. ಎಲ್ ಸೀನಾ, ನಾಗಲಕೆರೆ ಗೋವಿಂದ ಕಾಂಗ್ರೆಸ್ ಪಕ್ಷದ ಮುಖಂಡರಾದ ಪರಶು ರಾಮುಡು, ಯರ್ರಗುಡಿ ಮುದಿ ಮಲ್ಲಯ್ಯ, ಗುಜರಿ ಬಸವರಾಜ್, ಸೋಮು, ವಿ.ಎನ್ ಶ್ರೀನಾಥ್, ಚಿನ್ನ, ಜೆರಾಲ್ಡ್ ಸೇರಿದಂತೆ ಇನ್ನೂ ಅನೇಕ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತ–ರಿದ್ದರು.

## ಬಿಜೆಪಿ–ಬಳ್ಳಾರಿ ನಗರದಿಂದ ಸೋಮಶೇಖರ ರೆಡ್ಡಿ ನಾಮಪತ್ರ ಸಲ್ಲಿಕೆ



ಬಳ್ಳಾರಿ: ಬಳ್ಳಾರಿ ನಗರ ಕ್ಷೇತ್ರದಿಂದ ಹಾಲಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ಅವರು ಶನಿವಾರರಂದು ಬಿಜೆಪಿ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದರು. ಇದೇ ರೀತಿ ಜಿಲ್ಲೆಯ ಹಲವಡೆ ಅನೇಕರು ನಾಮಪತ್ರ ಸಲ್ಲಿಸಿದ್ದಾರೆ. ಕಂಪ್ಲಿಯಲ್ಲಿ ತಮ್ಮ ನೂರಾರು ಬೆಂಲಿಗರಿಂದ ಸುರೇಶ್ ಬಾಬು ಮೆರವಣಿಗೆ ಮೂಲಕ ತೆರಳಿ ನಾಮಪತ್ರ ಸಲ್ಲಿಸಿದ್ದಾರೆ.

ಇತ್ತ ಬಳ್ಳಾರಿಯಲ್ಲಿ ನಗರ ದೇವತೆ ಕನಕ ದುರ್ಗಮ್ಮಗೆ ಪೂಜೆ ಸಲ್ಲಿಸಿದ ಜಿ. ಸೋಮಶೇಖರ ರೆಡ್ಡಿ ಅವರು. ತಮ್ಮಸಾವಿರಾರು ಬೆಂಬಲಿಗರು, ಪಕ್ಷದ ಕಾರ್ಯಕರ್ತರು, ಮುಖಂಡರೊಂದಿಗೆ ಪಾದಯಾತ್ರೆ ಮೂಲಕ ಪಾಲಿಕೆ ಕಚೇರಿಗೆ ತೆರಳಿ ಚುನಾವಣಾಧಿಕಾರಿ, ಪಾಲಿಕೆ ಆಯುಕ್ತ ಎಂ. ಎನ್, ರುದ್ರೇಶ್ ಅವರಿಗೆ ನಾಮ ಪತ್ರ ಸಲ್ಲಿಸಿದರು.ಸೋಮಶೇಖರ ರೆಡ್ಡಿ ಅವರು ಬಳ್ಳಾರಿ ನಗರ ಕ್ಷೇತ್ರದಿಂದ ಬಿಜೆಪಿಯಿಂದ ಮೂರನೇ ಬಾರಿಗೆ ಶಾಸಕರಾಗಲು ಬಯಸಿ ಕಣಕ್ಕಿಳಿದಿದ್ದಾರೆ.ನಾಮಪತ್ರ ಸಲ್ಲಿಸುವ ಮುನ್ನ ಸಂಜೆವಾಣಿಯೊಂದಿಗೆ ಮಾತನಾಡಿದ ಸೋಮಶೇಖರ ರೆಡ್ಡಿ ಅವರು ಈ ಬಾರಿ ತಮ್ಮ ಗೆಲುವು ಖಚಿತ ಎಂದು. ಎದುರಾಳಿ ಯಾರೆಂದು ನಾನು ಚುನಾವಣೆ ಎದುರಿಸಲ್ಲ. ನನ್ನ ಗೆಲುವಿನ ಹೋರಾಟ ನಾನು ಮಾಡುವೆ. ಸಚಿವ ಶ್ರೀರಾಮುಲು, ಪಕ್ಷದ ಎಲ್ಲ ಮುಖಂಡರು, ಬೃಹತ್ ಕಾರ್ಯಕರ್ತರ ಪಡೆ, ಬೆಂಬಲಿಗರು, ಹಿತೈಷಿಗಳ ಆಶೀರ್ವಾದ ಇದೆ. ಗೆಲುವು ಖಚಿತ ಮಾರ್ಜಿನ ಬಗ್ಗೆ ಅಷ್ಟೇ ಮತದಾರ ತೀರ್ಮಾನ ಮಾಡಬೇಕು ಎಂದರು.

ಕೆ.ಆರ್.ಪಿ ಪಕ್ಷ ನಿಮ್ಮ ಗೆಲುವಿಗೆ ಅಡ್ಡಿಯಾಗಲ್ಲವೇ ಎಂಬ ಪ್ರಶ್ನೆಗೆ ಇದು ಪ್ರಜಾ ಪ್ರಭುತ್ವ, ಸೊಸೆ ಸ್ಪರ್ಧಿಸುತ್ತಿದ್ದಾರಂತೆ. ಅವರ ದಾರಿ ಅವರಿಗೆ, ನಮ್ಮ ದಾರಿ ನಮಗೆ ತೀರ್ಪು ಮತದಾರರದು ಎಂದರು. ಕೇಂದ್ರ ಮತ್ತು ರಾಜ್ಯದಲ್ಲಿ ಡಬಲ್ ಇಂಜಿನ್ ಸರ್ಕಾರದ ಮೂಲಕ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಮಾಡಿರುವುದು ಜನತೆಗೆ ಗೊತ್ತಿದೆ. 12 ಸಾವಿರ ಕುಟುಂಬಗಳಿಗೆ ಪಟ್ಟಾ ಹಂಚಿದೆ, ರಸ್ತೆಗಳ ಅಗಲೀಕರಣ ಅಭಿವೃದ್ಧಿ, ಕುಡಿಯುವ ನೀರು, ಕ್ರೀಡಾಂಗಣ ನಲ್ಲ ಚೆರುವು ಕೆರೆ ಅಭಿವೃದ್ಧಿ ಸೇರಿದಂತೆ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದೇವೆ ಎಂದು ಹೇಳಿಕೊಂಡರು.

## ಏ 18 ರಂದು ಸೋಮಲಿಂಗಪ್ಪ ನಾಮಪತ್ರ ಸಲ್ಲಿಕೆ



ಬಳ್ಳಾರಿ: ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ನಾಲ್ಕನೇ ಬಾರಿಗೆ ಶಾಸಕರಾಗಲು ಬಯಸಿ. ಹಾಲಿ ಶಾಸಕ ಎಂ.ಎಸ್.ಸೋಮಲಿಂಗಪ್ಪ ಏ.18 ರಂದು ನಾಮಪತ್ರ ಸಲ್ಲಿಸಲಿದ್ದಾರೆಂದು ಜಿಲ್ಲಾ ಬಿಜೆಪಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ. ಅಂದು ಅವರು ಸಿರುಗುಪ್ಪ ನಗರದಲ್ಲಿ ತಮ್ಮ ಅಪಾರ ಬೆಂಬಲಿಗರು ಪಕ್ಷದ ಕಾರ್ಯಕರ್ತರೊಂದಿಗೆ ಬೃಹತ್ ಮೆರವಣಿಗೆ ಮೂಲಕ ತೆರಳಿ ನಾಮಪತ್ರ ಸಲ್ಲಿಸಲಿದ್ದಾರೆ.

## ಸಿರುಗುಪ್ಪಗೆ ಬಿ.ಎಂ.ನಾಗರಾಜ್, ಹರಪನಹಳ್ಳಿಗೆ ಎನ್.ಕೊಟ್ರೇಶ್ ಕೈ ಟಿಕೆಟ್ ಘೋಷಣೆ



ಬಳ್ಳಾರಿ: ಬಳ್ಳಾರಿ ಜಿಲ್ಲೆಯಲ್ಲಿ ಕುತೂಹಲ ಮೂಡಿಸಿದ್ದ ಕಾಂಗ್ರೆಸ್ ಅಭ್ಯರ್ಥಿಗಳ ಕೈ ಟಿಕೆಟ್ ಶನಿವಾರದಂದು ಅಧಿಕೃತವಾಗಿ ಬಿಡುಗಡೆ ಮಾಡಿದ್ದು, ನಾರಾ ಭರತ್ ರೆಡ್ಡಿಗೆ ಬಳ್ಳಾರಿ ನಗರದ ಕ್ಷೇತ್ರದಿಂದ ಸ್ಪರ್ಧೆ ಮಾಡಲು ಕಾಂಗ್ರೆಸ್ ಮೂರನೇ ಪಟ್ಟಿಯಲ್ಲಿ ಟಿಕೆಟ್ ಘೋಷಣೆ ಮಾಡಿದೆ.

ಇದರಿಂದಾಗಿ ಹಲವು ರೀತಿ ಊಹಾ ಪೋಹಗಳಿಗೆ ತೆರೆ ಬಿದ್ದಿದೆ. ಇನ್ನು ಸಿರುಗುಪ್ಪ ಕ್ಷೇತ್ರದಿಂದ ಮಾಜಿ ಶಾಸಕ ಬಿ.ಎಂ.ನಾಗರಾಜ್ ಅವರಿಗೆ ಟಿಕೆಟ್ ದೊರೆತಿದೆ. ಇನ್ನು ಹರಪನಹಳ್ಳಿ ಕ್ಷೇತ್ರದಿಂದ ಎಂಪಿ ಪ್ರಕಾಶ್ ಕುಟುಂಬವನ್ನು ಹೊರಗಿಟ್ಟು ಪಂಚಮಸಾಲಿ ಸಮಾಜದ ಕೊಟ್ರೇಶ್ ಅವರಿಗೆ ಟಿಕೆಟ್ ಘೋಷಣೆ ಆಗಿದೆ.

ಕಾಂಗ್ರೆಸ್ ಅವಿಭಜಿತ ಬಳ್ಳಾರಿ ಜಿಲ್ಲೆಯ ಎಲ್ಲಾ ಕ್ಷೇತ್ರಗಳಿಗೆ ಟಿಕೆಟ್ ಘೋಷಣೆ ಮಾಡಿದೆ. ಆದರೆ ಬಿಜೆಪಿ ಮಾತ್ರ ಇನ್ನೂ ಹಗರಿ ಬೊಮ್ಮಹಳ್ಳಿ ಕ್ಷೇತ್ರದ ಟಿಕೆಟ್ ಘೋಷಣೆ ಬಾಕಿ ಉಳಿಸಿದೆ.


## ಎಪಿಎಂಸಿ ಹೋಲ್‌ಸೇಲ್ ತರಕಾರಿ ವರ್ತಕರ ಸಂಘದಿಂದ ಅಂಬೇಡ್ಕರ್ ಜಯಂತಿ ಆಚರಣೆ



ಬಳ್ಳಾರಿ: ಬಳ್ಳಾರಿ ನಗರದ ಎಪಿಎಂಸಿಯಲ್ಲಿನ ಹೋಲ್‌ಸೇಲ್ ತರಕಾರಿ ವರ್ತಕರ ಸಂಘದಿಂದ ದಿನಾಂಕ 14.04.2023 ಶುಕ್ರವಾರ ರಂದು ಭಾರತ ರತ್ನ ಸಂವಿಧಾನ ಶಿಲ್ಪಿ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರ 132ನೇಯ ಜಯಂತಿಯನ್ನು ಅದ್ದೂರಿಯಾಗಿ ಆಚರಣೆ ಮಾಡಲಾಯಿತು.

ಈ ಕಾರ್ಯಕ್ರಮದಲ್ಲಿ ಎಲ್ಲಾ ವರ್ತಕರು ಮತ್ತು ದಲ್ಲಾಳಿಯರು,ತರಕಾರಿ ಹಮಾಲಿಯರು ,ಚಿಲ್ಲರೆ ವ್ಯಾಪಾರಸ್ಥರು, ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು ಎಂದು ಡಿ.ಅಬ್ದುಲ್ ರೆಹಮನ್ ಅಧ್ಯಕ್ಷರು ಬಳ್ಳಾರಿ ಹೋಲಸೇಲ್ ತರಕಾರಿ ವರ್ತಕರು ಹಾಗು ದಲ್ಲಾಳರ ಸಂಘ ಇವರು ತಿಳಿಸಿದರು.

## ಬಳ್ಳಾರಿ ಜಿಲ್ಲಾ ಕುರುಬರ ಸಂಘದ ಅಧ್ಯಕ್ಷರಾಗಿ ರಾಮಕೃಷ್ಣ ಅವಿರೋಧ ಆಯ್ಕೆ



ಬಳ್ಳಾರಿ: ಬಳ್ಳಾರಿ ಜಿಲ್ಲಾ ಕುರುಬರ ಸಂಘದ ನೂತನ ಅಧ್ಯಕ್ಷರಾಗಿ ಕೆ.ರಾಮಕೃಷ್ಣ ಅವರು ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ.

ಈ ಹಿಂದೆ ಅಧ್ಯಕ್ಷರಾಗಿದ್ದ ಕೆ.ಎರ್ರಿಗೌಡ ಅವರ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಸಂಘದ ಕಚೇರಿಯಲ್ಲಿ ಉಪಾಧ್ಯಕ್ಷ ಕೆ.ಮಲ್ಲಿಕಾರ್ಜುನ ಅವರ ಅಧ್ಯಕ್ಷತೆಯಲ್ಲಿ ನಡೆದ ನಿರ್ದೇಶಕರ ಸಭೆಯಲ್ಲಿ ರಾಮಕೃಷ್ಣ ಅವರನ್ನು ಆಯ್ಕೆ ಮಾಡಲಾಯ್ತು.

ಇವರು ಈ ಹಿಂದೆ ಸಂಘದ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದರು. ಈ ಸಂದರ್ಭದಲ್ಲಿ ಕಾರ್ಯದರ್ಶಿ ಎ.ಮಲ್ಲೇಶಿ, ಖಜಾಂಚಿ ಅಲ್ಲಿಪುರ ಕೆ.ಮೋಹನ್, ಮುಖಂಡರುಗಳಾದ ದಮ್ಮೂರು ಸೋಮಪ್ಪ,ಬಿ. ಕೆ.ಕೆರೆಕೋಡಪ್ಪ, ಡಾ.ಪಿ.ಎಲ್.ಗಾದಿಲಿಂಗನಗೌಡ, ಸಿಂದವಾಳ ಸಿದ್ದನಗೌಡ, ಕೆ.ಎ.ರಾಮಲಿಂಗಪ್ಪ, ಬಿಸಲಹಳ್ಳಿ ತಿಪ್ಪೇರುದ್ರಪ್ಪ, ಕೊಳಗಲ್ಲು ಮಲ್ಲಿಕಾರ್ಜುನ ಮೊದಲಾದವರು ಇದ್ದರು.

## ವಿದ್ಯುತ್ ಹರಿವು

ಬೆಳಗಾವಿ: ಬೆಳಗಾವಿ ಜಿಲ್ಲೆಯ ಅಥಣಿ ಹಾಗೂ ಚಿಕ್ಕೋಡಿ ತಾಲೂಕಿನಲ್ಲಿ ಚಾಲ್ತಿಯಲ್ಲಿರುವ 110ಕೆವಿ ಶಿರಗುಪ್ಪಿ ವಿದ್ಯುತ್ ಕೇಂದ್ರದಿಂದ 110ಕೆವಿ ಕಾಗವಾಡ ವಿದ್ಯುತ್ ಕೇಂದ್ರದವರೆಗೆ ಜೋಡಿ ಗೋಪುರಗಳ ಮೇಲೆ ಹೊಸದಾಗಿ 13.019 ಕೀ.ಮಿ. ಉದ್ದದ ಒಂಟಿ ವಿದ್ಯುತ್ ಪ್ರಸರಣ ಮಾರ್ಗವನ್ನು ನಿರ್ಮಿಸಲಾಗಿದೆ.

ಸದರಿ 110 ಕೆವಿ ವಿದ್ಯುತ್ ಪ್ರಸರಣ ಮಾರ್ಗವು ಬೆಳಗಾವಿ ಜಿಲ್ಲೆಯ, ಅಥಣಿ ಹಾಗೂ ಕಾಗವಾಡ ತಾಲೂಕಿನ ಕಾಗವಾಡ , ಶೇಡಬಾಳ ಶ್ರೀಧರಗಡ್ಡ ಶಿರಗುಪ್ಪಿ ಹಾಗೂ ಅಕ್ಕಪಕ್ಕದ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳು ಮತ್ತು ಪ್ರದೇಶಗಳಲ್ಲಿ ಹಾಯ್ದು ಹೋಗುತ್ತದೆ.

ವಿದ್ಯುತ್ ಪ್ರಸರಣ ಮಾರ್ಗವನ್ನು ಏಪ್ರಿಲ್.18 2023 ರಂದು ಇಲ್ಲವೆ ತದನಂತರ ಯಾವುದೇ ಕ್ಷಣದಲ್ಲಿ ವಿದ್ಯುತ್ತನ್ನು ಹ–ರಿಬಿಡಲಾಗುವದು ಕಾರಣ ವಿದ್ಯುತ್ ಗೋಪುರಗಳನ್ನು ಹತ್ತುವುದಾಗಲಿ ಅಥ–'ವಾ ತಂತಿಗಳನ್ನು ಮುಟ್ಟುವುದಾಗಲಿ ಹಸಿರು ಟೊಂಗೆಗಳನ್ನು ಎಸೆಯುವುದಾಗಲಿ ಮತ್ತು ಲೈನ್ ಕೆಳಗಡೆ ದನಕರುಗಳನ್ನು ಕಟ್ಟುವುದಾಗಲಿ, ಗಿಡಮರಗಳನ್ನು ನೆಡುವುದಾಗಲಿ, ಮನೆ/ಗುಡಿಸಲುಗಳನ್ನು ನಿರ್ಮಿಸುವುದಾಗಲಿ ಪ್ರಾಣಾಪಾಯಕವಾಗುವುದು ಆದ್ದರಿಂದ ಇವುಗಳನ್ನು ಮಾಡಬಾರದು.

ಒಂದು ವೇಳೆ ಇಂತಹ ಕೃತ್ಯಗಳನ್ನು ಯಾರಾದರು ಎಸಗಿದಲ್ಲಿ ಮುಂದೆ ಒದಗಬಹುದಾದ ಅಪಾಯಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಜವಾಬ್ದಾರಿಯಾಗಿರುವುದಿಲ್ಲ ಎಂದು ಬೆಳಗಾವಿ ಬೃಹತ್ ಕಾಮಗಾರಿ ವಿಭಾಗ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಕಾರ್ಯನಿರ್ವಾಹಕ ಅಭಿಯಂತರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚುನಾವಣಾ ವೆಚ್ಚ ವೀಕ್ಷಕರು ಸಾರ್ವಜನಿಕರ ಭೇಟಿಗೆ ಲಭ್ಯ

ಬೆಳಗಾವಿ: ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆ–2023 ರ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆಯ ವಿಧಾನಸಭಾ ಮತಕ್ಷೇತ್ರಕ್ಕೆ ಚುನಾವಣಾ ಆಯೋಗದಿಂದ ನೇಮಿಸಲಾಗಿರುವ ಚುನಾವಣಾ ವೆಚ್ಚ ವೀಕ್ಷಕರು ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ.

ಮತಕ್ಷೇತ್ರಗಳು ಹಾಗೂ ಚುನಾವಣಾ ವೆಚ್ಚ ವೀಕ್ಷಕರ ವಿವರ:

* 01–ನಿಪ್ಪಾಣಿ, 02–ಚಿಕ್ಕೋಡಿ–ಸದಲಗಾ, 03–ಅಥಣಿ ಕ್ಷೇತ್ರಗಳಿಗೆ ಅರನಬ್ ಸರಕಾರ CBDT, IRS ಮೊ.ಸಂ 8105684926, 8147265859, ಬೆಳಿಗ್ಗೆ 10 ರಿಂದ 11 ಗಂಟೆವರೆಗೆ ಪಿಡಬ್ಲ್ಯೂಡಿ ಐ.ಬಿ ಚಿಕ್ಕೋಡಿ ವಿ.ಐ.ಪಿ ಸೂಟ್. ನಂ–2, ಪಿಡಬ್ಲ್ಯೂಡಿ ಐ.ಬಿ. ಅಥಣಿ ವಿ.ಐ.ಪಿ ಸೂಟ್. ನಂ–2 ರಲ್ಲಿ ಲಭ್ಯವಿರುತ್ತಾರೆ.
* 04–ಕಾಗವಾಡ, 05–ಕುಡಚಿ ಕ್ಷೇತ್ರಗಳಿಗೆ ಚನಬಾಷಾಮೀರನ್ CBEC, IRS(C&CE) ಮೊ.ಸಂ 7349408283, ಬೆಳಿಗ್ಗೆ 10 ರಿಂದ 11 ಗಂಟೆವರೆಗೆ ಪಿಡಬ್ಲ್ಯೂಡಿ ಐ.ಬಿ ಕಾಗವಾಡ ವಿ.ಐ.ಪಿ ಸೂಟ್. ನಂ–2 ರಲ್ಲಿ ಲಭ್ಯವಿರುತ್ತಾರೆ.
* 06–ರಾಯಬಾಗ, 07–ಹುಕ್ಕೇರಿ ಕ್ಷೇತ್ರಗಳಿಗೆ ಸಿದ್ಧಾರ್ಥನ್ ಟಿ CBEC, IRS(C&CE) ಮೊ.ಸಂ 7349751819, ಬೆಳಿಗ್ಗೆ 10 ರಿಂದ 11 ಗಗಂಟೆವರೆಗೆ ಪಿಡಬ್ಲ್ಯೂಡಿ ಐ.ಬಿ ರಾಯಬಾಗ ವಿ.ಐ.ಪಿ ಸೂಟ್. ನಂ–2, ಪಿಡಬ್ಲ್ಯೂಡಿ ಐ.ಬಿ ಹುಕ್ಕೇರಿ ವಿ.ಐ.ಪಿ ಸೂಟ್. ನಂ–2 ರಲ್ಲಿ ಲಭ್ಯವಿರುತ್ತಾರೆ.
* 08–ಅರಬಾವಿ ಕ್ಷೇತ್ರಕ್ಕೆ ಸುಮಂಥ ಶ್ರೀನಿವಾಸ ಎ.ಎಸ್, CBDT, IRS ಮೊ.ಸಂ 7338215859, ಬೆಳಿಗ್ಗೆ 10 ರಿಂದ 11 ಗಂಟೆವರೆಗೆ ಪಿಡಬ್ಲ್ಯೂಡಿ ಐ.ಬಿ ಅರಬಾವಿ ವಿ.ಐ.ಪಿ ಸೂಟ್. ನಂ–2 ರಲ್ಲಿ ಲಭ್ಯವಿರುತ್ತಾರೆ.
* 09–ಗೋಕಾಕ ಕ್ಷೇತ್ರಕ್ಕೆ ಮಧುಕರ್ ಅವೇಸ್ CBDT, IRS ಮೊ.ಸಂ 9980127719 ಬೆಳಿಗ್ಗೆ 10 ರಿಂದ 11 ಗಂಟೆವರೆಗೆ ಪಿಡಬ್ಲ್ಯೂಡಿ ಐ.ಬಿ ಗೋಕಾಕ ವಿ.ಐ.ಪಿ ಸೂಟ್. ನಂ–2 ರಲ್ಲಿ ಲಭ್ಯವಿರುತ್ತಾರೆ.
* 10–ಯಮಕನಮರಡಿ ಕ್ಷೇತ್ರಕ್ಕೆ ರಾಕೇಶ್ ಜೆ. ರಾಣಾ CBDT, IRS ಮೊ.ಸಂ 7619697879, ಬೆಳಿಗ್ಗೆ 10 ರಿಂದ 11 ಗಂಟೆವರೆಗೆ ಪಿಡಬ್ಲ್ಯೂಡಿ ಐ.ಬಿ ಸಂಕೇಶ್ವರ ವಿ.ಐ.ಪಿ ಸೂಟ್. ನಂ–2 ರಲ್ಲಿ ಲಭ್ಯವಿರುತ್ತಾರೆ.
* 11–ಬೆಳಗಾವಿ ಉತ್ತರ ಮತ್ತು 12–ಬೆಳಗಾವಿ ದಕ್ಷಿಣ ಕ್ಷೇತ್ರಗಳಿಗೆ ಅತುಲ್ ಕುಮಾರ್ ಪಾಂಡೆ CBDT, IRS ಮೊ.ಸಂ 8296017879 ಬೆಳಿಗ್ಗೆ 10 ರಿಂದ 11 ಗಂಟೆವರೆಗೆ ಪಿಡಬ್ಲ್ಯೂಡಿ ಐ.ಬಿ ಹಳೆ ಸರ್ಕ್ಯೂಟ್ ಹೈಸ ಬೆಳಗಾವಿ. ವಿ.ಐ.ಪಿ ಸೂಟ್. ನಂ–3 ರಲ್ಲಿ ಲಭ್ಯವಿರುತ್ತಾರೆ.
* 13–ಬೆಳಗಾವಿ ಗ್ರಾಮೀಣ ಕ್ಷೇತ್ರಕ್ಕೆ ಸುಬೋಧ್ ಸಿಂಘ್ CBEC,IRS C&CE) ಮೊ.ಸಂ 8197742829 ಬೆಳಿಗ್ಗೆ 10 ರಿಂದ 11 ಗಂಟೆವರೆಗೆ ಪಿಡಬ್ಲ್ಯೂಡಿ ಐ.ಬಿ ಹಳೆ ಸರ್ಕ್ಯೂಟ್ ಹೈಸ ಬೆಳಗಾವಿ. ವಿ.ಐ.ಪಿ ಸೂಟ್. ನಂ–4 ರಲ್ಲಿ ಲಭ್ಯವಿರುತ್ತಾರೆ.
* 14–ಖಾನಾಪುರ ಮತ್ತು 15–ಕಿತ್ತೂರು ಕ್ಷೇತ್ರಗಳಿಗೆ ಸಂಜೀತ ಸಿಂಘ್ CBEC,IRS C&CE) ಮೊ.ಸಂ 7204998729, ಬೆಳಿಗ್ಗೆ 10 ರಿಂದ 11 ಗಂಟೆವರೆಗೆ ಪಿಡಬ್ಲ್ಯೂಡಿ ಐ.ಬಿ ಖಾನಾಪುರ ವಿ.ಐ.ಪಿ ಸೂಟ್. ನಂ–2, ಪಿಡಬ್ಲ್ಯೂಡಿ ಐ.ಬಿ ಕಿತ್ತೂರು ವಿ.ಐ.ಪಿ ಸೂಟ್. ನಂ–2 ರಲ್ಲಿ ಲಭ್ಯವಿರುತ್ತಾರೆ.
* 16–ಬೈಲಹೊಂಗಲ ಮತ್ತು 17–ಸವದತ್ತಿ ಯಲ್ಲಮ್ಮ ಕ್ಷೇತ್ರಗಳಿಗೆ ಯೋಗೇಶ ಯಾದವ CBEC,IRS C&CE) ಮೊ.ಸಂ 8197920327, ಬೆಳಿಗ್ಗೆ 10 ರಿಂದ 11 ಗಂಟೆವರೆಗೆ ಪಿಡಬ್ಲ್ಯೂಡಿ ಐ.ಬಿ ಬೈಲಹೊಂಗಲ ವಿ.ಐ.ಪಿ ಸೂಟ್. ನಂ–2, ಪಿಡಬ್ಲ್ಯೂಡಿ ಐ.ಬಿ ಸವದತ್ತಿ ವಿ.ಐ.ಪಿ ಸೂಟ್. ನಂ–2 ರಲ್ಲಿ ಲಭ್ಯವಿರುತ್ತಾರೆ.
* 18–ರಾಮದುರ್ಗ ಮತಕ್ಷೇತ್ರಕ್ಕೆ ಎಂ. ಎಝಿಲಾರಸನ್ CBEC,IRS C&CE) ಮೊ.ಸಂ 7624974683, ಬೆಳಿಗ್ಗೆ 10 ರಿಂದ 11 ಗಂಟೆವರೆಗೆ ಪಿಡಬ್ಲ್ಯೂಡಿ ಐ.ಬಿ ರಾಮದುರ್ಗ ವಿ.ಐ.ಪಿ ಸೂಟ್. ನಂ–2 ರಲ್ಲಿ ಲಭ್ಯವಿರುತ್ತಾರೆ ಎಂದು ಬೆಳಗಾವಿ ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಜಿಲ್ಲಾಧಿಕಾ–ರಿಗಳು ತಿಳಿಸಿದ್ದಾರೆ.

# ಬೌದ್ಧ ಮಂದಿರ ಕೆಡವಿ ತಿರುಪತಿ ದೇಗುಲ ನಿರ್ಮಾಣ: ಚೇತನ್ ಅಂಹಿಸಾ ಹೊಸ ವಿವಾದ

ಬೆಂಗಳೂರು: ಬೌದ್ಧ ಮಂದಿರವನ್ನು ಕೆಡವಿ ತಿರುಪತಿ ದೇಗುಲ ನಿರ್ಮಾಣ ಮಾಡಲಾಗಿದೆ ಎಂದು ನಟ ಚೇತನ್ ಅಹಿಂಸಾ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಯೂಟ್ಯೂಬ್ ಸಂದರ್ಶನವೊಂದಲ್ಲಿ ತಿರುಪತಿ ತಿರುಮಲ ದೇವಸ್ಥಾನದ ಬಗ್ಗೆ ಮಾತನಾಡಿರುವ ನಟ ಚೇತನ್, 'ಬುದ್ಧನ ಮಂದಿರ ಒಡೆದು ತಿರುಪತಿ ದೇವಸ್ಥಾನ ಕಟ್ಟಿದ್ದಾರೆ ಎಂದು ಹೇಳಿದ್ದಾರೆ.

ಯೂಟ್ಯೂಬ್ ಸಂದರ್ಶನವೊಂದಲ್ಲಿ ತಿರುಪತಿ ತಿರುಮಲ ದೇವಸ್ಥಾನದ ಬಗ್ಗೆಯೂ ಇಂತದ್ದೇ ವಿವಾದಾತ್ಮಕ ಹೇಳಿಕೆ ನೀಡಿರುವ ಚೇತನ್, "ನಿಜ ಹೇಳಬೇಕು ಅಂದರೆ ಈ ದೇವಸ್ಥಾನಗಳೆಲ್ಲಾ ಹಿಂದೆ ಬುದ್ಧ ವಿಹಾರಗಳು ಆಗಿತ್ತು. ವೈದಿಕ ಕಾಲ ಎನ್ನುವುದು ಕ್ರಿಸ್ತ ಪೂರ್ವ 1500 ಕ್ರಿಸ್ತಪೂರ್ವದಿಂದ 500 ಕ್ರಿಸ್ತಪೂರ್ವ ನಡುವಿನದ್ದು. ಆ ನಂತರ ಬುದ್ಧ ಬರ್ತಾರೆ. ವೈದಿಕ ಕಾಲದಲ್ಲಿ ಹೋಮ, ಹವಯ, ಯಜ್ಞ ಎಲ್ಲವೂ ಇತ್ತು. ಆದರೆ ದೇವಸ್ಥಾನ, ಮಂದಿರಗಳು ಇರಲಿಲ್ಲ. ಬುದ್ಧ ಬಂದಮೇಲೆ ಅಶೋಕನ ನಂತರ ಬೌದ್ಧ ಧರ್ಮ ಹರಡಿದ ನಂತರ ಬುದ್ಧ ಸ್ತೂಪಗಳು, ವಿಹಾರಗಳು ಬಂತು. ಆ ನಂತರ ಮತ್ತೆ ಬ್ರಾಹ್ಮಣ್ಯ, ವೈದಿಕ ಪರಂಪರೆ ಬಂದಾಗ 84 ಸಾವಿರ ಬುದ್ಧ ವಿಹಾರಗಳನ್ನು ಒಡೆದು ಹಾಕಿ ಹಿಂದೂ ಮಂದಿಗಳನ್ನಾಗಿ ಮಾಡಿದರು"

ಅಲ್ಲಿಯವರೆಗೂ ದೇವಸ್ಥಾನಗಳು ಇರಲಿಲ್ಲ. ಯಾಕಂದರೆ ವೈದಿಕ ಪರಂಪರೆಯಲ್ಲಿ ಹೋಮ, ಹವ



ಇರುತ್ತೆ. ಇದಕ್ಕೆಲ್ಲಾ ದಾಖಲೆಗಳು ಇವೆ. ಇದಕ್ಕೆ ಎಲ್ಲಿ ಬೇಕಾದರೂ ಸಾಕ್ಷಿ ತೋರಿಸುತ್ತೇನೆ. ತಿರುಪತಿ, ಕೇದಾರನಾಥ ದೇವಸ್ಥಾನಗಳನ್ನು ಇದೇ ರೀತಿ ಕಟ್ಟಿದ್ದಾರೆ. ತಿರುಪತಿ ದೇವಸ್ಥಾನ ಕೂಡ ಮೊದಲು ಬುದ್ಧ ಮಂದಿರ ಆಗಿತ್ತು. ನಮ್ಮ ಇತಿಹಾಸ ದಾಖಲೆಗಳಲ್ಲಿ 84 ಸಾವಿರ ಬುದ್ಧ ವಿಹಾರಗಳು ಇವೆ ಎಂದು ಇದೆ. ಅದನ್ನೆಲ್ಲಾ ರಾಜ ಅಶೋಕ ಹಾಗೂ ಆತನ ನಂತರದವರು ಕಟ್ಟಿರುವುದು. 185 ಕ್ರಿಸ್ತಪೂರ್ವ ಬಂದಮೇಲೆ ವೈದಿಕ ಪರಂಪರೆ ವಾಪಸ್ ಬಂದಮೇಲೆ ಈ ಬುದ್ಧ ವಿಹಾರಗಳನ್ನು ಒಡೆದು, ಬುದ್ಧ ಬಿಕ್ಕುಗಳನ್ನು ಸಾಯಿಸಿದರು, ಬುದ್ಧ ವಿಹಾರಗಳನ್ನು ವೈದಿಕ ಮಂದಿರಗಳಾಗಿ ಮಾಡಿದರು" ಎಂದಿದ್ದಾರೆ.

ಕರ್ನಾಟಕಕ್ಕೆ ಪರಿಯಾರ್, ಅಂಬೇಡ್ಕರ್ ಸಿದ್ಧಾಂತ ಅಗತ್ಯ ಇದೆ. ಬಿಜೆಪಿಯ ಹಿಂದುತ್ವ ಕೂಡ ಅಲ್ಲ. ಕಾಂಗ್ರೆಸ್, ಜೆಡಿಎಸ್, ಆಪ್‌ನ ಪೊಲಿಟಿಕಲ್ ಹಿಂದೂಯಿಸಂ ಅಲ್ಲ, ಕಮ್ಯೂನಿಸಂ ಕೂಡ ಅಲ್ಲ. ಹೆಚ್‌ಟಿಪಿಐ ಮೊದಲೇ ಅಲ್ಲ. ನನ್ನ ಕಣ್ಣಲ್ಲಿ ನಮ್ಮ ದೇಶದ ಯಾವುದೇ ಪಕ್ಷ ಪರಿವರ್ತನೆಯ ಸಿದ್ಧಾಂತ ಹೇಳುತ್ತಿಲ್ಲ. ಸೈದ್ಧಾಂತಿಕವಾಗಿ ನನಗೆ ಈ ವಿಚಾರಗಳ ಬಗ್ಗೆ ವಿರೋಧ ಇದೆ ಎಂದಿದ್ದಾರೆ.

ಯಾವುದೇ ವ್ಯಕ್ತಿ ಮೇಲೆ ನನಗೆ ಕೋಪ ಇಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಿಮ್ಮ ಸತ್ಯ ಹೇಳುವ ಹಕ್ಕು ನಿಮಗಿದೆ. ನಾನು ಕಂಡ ಸತ್ಯ ನಾನು ಹೇಳ್ತೀನಿ. ನಾನು ಅಂಕಿ ಅಂಶ, ದಾಖಲೆ ಇಟ್ಟುಕೊಂಡು ಮಾತನಾಡುತ್ತಿದ್ದೇನೆ. ಅದನ್ನು ಸೋಲಿಸಲು ಸಾಧ್ಯವಾದರೆ ನಿಮ್ಮ ದಾಖಲೆ ಇಡಿ. ರಾಮ ಎನ್ನುವ ವ್ಯಕ್ತಿ ಈ ಕಾಲದಲ್ಲಿ ಇದ್ದರು, ಇಲ್ಲಿ ಹುಟ್ಟಿದರು ಎಂದು ತೋರಿಸಿ, ನಿಮ್ಮ ಧಾರ್ಮಿಕ ನಂಬಿಕೆ ಸತ್ಯ ಇರಬಹುದು. ಆದರೆ ನಮ್ಮ ವೈಚಾರಿಕತೆ, ಬೌದ್ಧಿಕ ಪ್ರಪಂಚದ ಸತ್ಯ ಎಂದೆಂದಿಗೂ ಅಲ್ಲ. ಅದಕ್ಕೆ ಸಾಕ್ಷಿಯೂ ಇಲ್ಲ."


**ಸಂದರ್ಶನದ ವಿಡಿಯೋ ಲಿಂಕ್ ಟ್ವೀಟ್ ಮಾಡಿದ ನಟ**

ಈ ಸಂದರ್ಶನದ ವಿಡಿಯೋ ಲಿಂಕ್ ಅನ್ನು ಫೇಸ್‌ಬುಕ್‌ನಲ್ಲಿ ಶೇರ್ ಮಾಡಿರುವ ನಟ ಚೇತನ್, "ಇತ್ತೀಚಿನ ಸಂದರ್ಶನವೊಂದರಲ್ಲಿ, ತಿರುಪತಿ ಮೂಲತಃ ಬೌದ್ಧ ಮಂದಿರ ಎಂದು ನಾನು ಹೇಳಿದ್ದೇನೆ. ಕೆ ಜಮನದಾಸ್ ಅವರು 'ತಿರುಪತಿ ಬಾಲಾಜಿ ಮೂಲತಃ ಬೌದ್ಧ ಮಂದಿರ' (ಏಪ್ರಿಲ್ 14, 2001) ಎಂಬ ತಮ್ಮ ಪುಸ್ತಕದಲ್ಲಿ ಈ ಹೇಳಿಕೆಯನ್ನು ಮಾನ್ಯ ಮಾಡಿದ್ದಾರೆ. ಇತಿಹಾಸಕಾರರ ಪ್ರಕಾರ, ದೇವಾಲಯಗಳು ಎಂದಿಗೂ ವೈದಿಕ ಸಂಸ್ಥೆಗಳಾಗಿರಲಿಲ್ಲ – ಅವುಗಳನ್ನು ಬೌದ್ಧ ಧರ್ಮದಿಂದ ವಶಪಡಿಸಿ ಕೊಳ್ಳಲಾಗಿದೆ/ಆಕ್ರಮಣ ಮಾಡಲಾಗಿದೆ" ಎಂದು ಬರೆದುಕೊಂಡಿದ್ದಾರೆ.

# ಉಚಿತ ಕಣ್ಣಿನ ತಪಾಸಣೆ ಹಾಗೂ ಶಸ್ತ್ರಚಿಕಿತ್ಸೆ ಶಿಬಿರ

ತಾಳಿಕೋಟೆ: ನಾನು ನಮ್ಮ ತಂದೆ ತಾಯಿಯ ಸ್ಮರಣೆಯ ಸಲುವಾಗಿ ಬಡವರು,ಕಣ್ಣಿನ ಸಮಸ್ಯೆಯಿಂದ ಬಳಲುತ್ತಿರುವವರಿಗೆ ಉಚಿತ ನೇತ್ರ ತಪಾಸಣೆ ಅಗತ್ಯವಿದ್ದವ–ರಿಗೆ ಶಸ್ತ್ರಚಿಕಿತ್ಸೆಗೆ ಸಹಾಯ ಹಸ್ತ ಮಾಡುತ್ತಿದ್ದೇನೆಂದು ಮನಿಯಾರ್ ಸೇವಾ ಟ್ರಸ್ಟ್ ಅಧ್ಯಕ್ಷ ಅಯೂಬ್ ಮನಿಯಾರ ಹೇಳಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿ, ನಮ್ಮನ್ನು ಅಗಲಿದ ತಂದೆ ಮದನಸಾಬ ಮನಿಯಾರ, ತಾಯಿ ಅಮಿನಬಿ ಮನಿಯಾರ ಅವರ ಸ್ಮರಣಾರ್ಥ ಕಳೆದ 9 ವರ್ಷದಿಂದ ವಿಜಯಪುರದ ಅನುಗ್ರಹ ಕಣ್ಣಿನ ಆಸ್ಪತ್ರೆಯ ಸಹಯೋಗದಲ್ಲಿ ಪವಿತ್ರ ರಮಜಾನ ಮಾಸದಲ್ಲಿ ಬಡಜನರಿಗೆ ಉಚಿತ ಕಣ್ಣಿನ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸೆ ಮಾಡಿಸುವ ಸೇವೆ ಮಾಡುತ್ತಿದ್ದೇವೆ ಎಂದರು.



ಈ ವರ್ಷವೂ ಉಚಿತ ಕಣ್ಣಿನ ಶಸ್ತ್ರಚಿಕಿತ್ಸೆ ಹಮ್ಮಿಕೊಂಡಿದ್ದು ತಾಳಿಕೋಟೆ ತಾಲೂಕಿನ ಜನರು ಉಚಿತ ಕಣ್ಣಿನ ತಪಾಸಣೆ ಹಾಗೂ ಕಣ್ಣಿನ ಶಸ್ತ್ರಚಿಕಿತ್ಸೆ ಮಾಡಿಕೊಳ್ಳಲು ನಿಮ್ಮ ಹೆಸರನ್ನು ನೋಂದಾಯಿಸಲು ಏ.17 ಕೊನೆಯ ದಿನವಾಗಿದೆ.ಏ.18 ರಂದು ಉಚಿತ ಕಣ್ಣಿನ ತಪಾಸಣೆಯನ್ನು ಮುದ್ದೇಬಿಹಾಳ ಪಟ್ಟಣದ ಸ್ಟೇಟ್ ಬ್ಯಾಂಕ್ ಹತ್ತಿರದ ಅನುಗ್ರಹ ಕಣ್ಣಿನ ಆಸ್ಪತ್ರೆಯಲ್ಲಿ ಮಾಡಲಾಗುತ್ತದೆ. ಇದರಲ್ಲಿ ಕಣ್ಣಿನ ಶಸ್ತ್ರ ಚಿಕಿತ್ಸೆ ಆಯ್ಕೆಯಾದವರನ್ನು ಏ.19 ರಂದು ವಿಜಯಪುರದ ಅನುಗ್ರಹ ಕಣ್ಣಿನ ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸೆ ಮಾಡ 'ಲಾಗುತ್ತದೆ ಈ ಶಿಬಿರದ ಸದುಪಯೋಗ ಪಡೆದುಕೊಳ್ಳುವವ–ರಿಗೆ ಮುದ್ದೇಬಿಹಾಳಕ್ಕೆ ತೆರಳಲು ವಾಹನದ ಸೌಲಭ್ಯವನ್ನು ಕೂಡಾ ಮಾಡಿದ್ದೇನೆಂದರು.

ಹೆಸರನ್ನು ನೋಂದಾಯಿಸಲು ಖಾಜಾಹುಸೇನ ಸಗರಿ ಸಗರ ಮೇಡಿಕಲ್ ಕತ್ರಿ ಭಜಾರ ಹಾಗೂ ಮುಜಾಹೀದ ನಮಾಜಕಟ್ಟಿ ತಾಳಿಕೋಟೆ ಮೋ. 9663488384ಗೆ ಸಂಪರ್ಕಿಸಬಹುದಾಗಿದೆ ಹೆಸರು ನೋಂದಾಯಿಸಲು ಬರುವಾಗ ಒಂದು ಐಡೆಂಟಿಟಿ ಸೈಜ್ ಕಲರ್ ಪೋಟೋ ಹಾಗೂ ಆಧಾರ್‌ಕಾರ್ಡ್ ಝರಾಕ್ಸ್ ಪ್ರತಿ ತರಬೇಕೆಂದು ಅವರು ಮನವಿ ಮಾಡಿದ್ದಾರೆ.

ರಂಜಾನ್ ಕಿಟ್ ವಿತರಣೆ : ಪ್ರತಿ ವರ್ಷ ರಂಜಾನ್ ಹಬ್ಬಕ್ಕೆ ಬಡವ–ರಿಗೆ ಹಬ್ಬ ಮಾಡಲು ರಂಜಾನ್ ಕಿಟ್ ವಿತರಣೆಗೆ ಹಬ್ಬದ ಸಾಮಗ್ರಿಗಳನ್ನು ಏ.20 ರಂದು ತಾಳಿಕೋಟಿಯಲ್ಲಿ ಕೊರ್ತಿ ಶಾದಿ ಹಾಲ್‌ನಲ್ಲಿ ರಂಜಾನ್ ಕಿಟ್‌ಗಳನ್ನು ನೀಡಲಾಗುತ್ತದೆ ಎಂದು ಅಯೂಬ ಮನಿಯಾರ ಅವರು ತಿಳಿಸಿದ್ದಾರೆ.

## ಕಾಗವಾಡ ತಾಲೂಕಿನ ವಿವಿಧ ಮತಗಟ್ಟೆ ಕೇಂದ್ರಗಳಿಗೆ ಇಒ ದಿಢೀರ್ ಭೇಟಿ



ಕಾಗವಾಡ: ಮೇ 10 ರಂದು ಮತದಾನ ಮಾಡಲು ಮತಗಟ್ಟೆ ಕೇಂದ್ರಗಳಿಗೆ ಆಗಮಿಸುವ ಸಾರ್ವಜನಿಕರಿಗೆ ಯಾವುದೇ ರೀತಿಯ ಸಮಸ್ಯೆಗಳು ಕಂಡು ಬರದಂತೆ ಎಚ್ಚರಿಕೆ ವಹಿಸಬೇಕು ಎಂದು ಸಮಿತಿ ಅಧ್ಯಕ್ಷರೂ ಆಗಿರುವ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸೂಚಿಸಿದರು.

ಕಾಗವಾಡ ತಾಲೂಕಿನ ಕೃಷ್ಣಾ ಕಿತ್ತೂರು, ಮಂಗಸೂಳಿ, ಮೋಳೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ವಿವಿಧ ಗ್ರಾಮಗಳಲ್ಲಿ ಸ್ಥಾಪಿಸಿದ ಮತಗಟ್ಟೆ ಕೇಂದ್ರಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಮತಗಟ್ಟೆ ಕೇಂದ್ರಗಳಿಗೆ ಅಗತ್ಯ ಮೂಲ ಸೌಕರ್ಯಗಳಾದ ಕುಡಿಯುವ ನೀರು, ವಿದ್ಯುತ್, ಶೌಚಾಲಯ, ವಿಕಲಚೇನರಿಗೆ ರ್ಯಾಂಪ್ , ವೀಲ್ ಚೇರ್, ಬಾಗಿಲು, ಕಿಟಕಿ, ಫ್ಯಾನ್, ವೀಲ್ ಇನ್ನಿತರ ಅಗತ್ಯ ಸೌಲಭ್ಯಗಳನ್ನು ಕೇಂದ್ರಗಳಲ್ಲಿ ಇರುವಂತೆ ನೋಡಿಕೊಳ್ಳಬೇಕೆಂದರು.

ಮತಗಟ್ಟೆಗಳಿಗೆ ಸುಣ್ಣ ಬಣ್ಣ ಹಚ್ಚಬೇಕು. ಬಾಗಿಲು ದುರಸ್ಥಿಗೊಳಿಸಬೇಕೆಂದು ನಿರ್ದೇಶನ ನೀಡಿದರು. ಈ ಸಂದರ್ಭದಲ್ಲಿ ಪಿಡಿಓ, ಕಾರ್ಯದರ್ಶಿಯವರು ಇದ್ದರು.

# ಜಾತ್ರಾ ಮಹೋತ್ಸವಗಳಿಂದ ಮನಸ್ಸು ಶಾಂತ: ಕಲ್ಮೇಶ್ವರ ಶ್ರೀ

ಬೈಲಹೊಂಗಲ: ಬದುಕಿನಲ್ಲಿ ಅಧ್ಯಾತ್ಮ ಭಾವ ಮೂಡಿಸಿಕೊಂಡು ಸಾಗಿದಾಗ ಮಾತ್ರ ಜೀವನ ಸಾರ್ಥಕವಾಗಲು ಸಾಧ್ಯವಾಗುತ್ತದೆ ಎಂದು ಚಿಪ್ಪಲಕಟ್ಟಿಯ ಬಾಳೇಹೊನ್ನೂರ ಶಾಖಾ ಸಂಸ್ಥಾನ ಹಿರೇಮಠದ ಡಾ. ಕಲ್ಮೇಶ್ವರ ಸ್ವಾಮೀಜಿ ಹೇಳಿದರು.

ಅವರು ಪಟ್ಟಣದ ಹೊಸೂರ ರಸ್ತೆಯಲ್ಲಿನ ಶ್ರೀ ಭಗಳಾಂಭಾದೇವಿ ದೇವಸ್ಥಾನದ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗಿದ ಧರ್ಮಸಭೆಯಲ್ಲಿ ಸಾನಿಧ್ಯ ವಹಿಸಿ ಮಾತನಾಡಿ, ಜಾತ್ರಾ ಮಹೋತ್ಸವಗಳು ಮನುಷ್ಯನ ಜಂಜಡವನ್ನು ದೂರು ಮಾಡುವಲ್ಲಿ ಸಹಕಾರಿಯಾಗಿದ್ದು ಮಠಗಳು ದೇಶದ ಸಂಸ್ಕೃತಿ–ಸಂಸ್ಕಾರವನ್ನು ಎತ್ತಿ ಹಿಡಿಯುವಲ್ಲಿ ಮುಂಚೂಣಿಯಲ್ಲಿವೆ ಎಂದರು.

ಧರ್ಮಾಧಿಕಾರಿ ವೀರಯ್ಯ ಸಾಮಿ ಹಿರೇಮಠ ಮಾತನಾಡಿ, ಸುಮಾರು ವರ್ಷಗಳಿಂದ ಜಾತ್ರಾ ಮಹೋತ್ಸವ ಅಂಗವಾಗಿ ಹಲವಾರು ವಿಧಾಯಕ ಕಾರ್ಯಗಳನ್ನು ಹಮ್ಮಿಕೊಂಡು ಆ ಮೂಲಕ ಸಾಧಕ–ರಿಗೆ, ಪ್ರತಿಬಾವಂತರಿಗೆ ಮಠದ ಮೂಲಕ ಪ್ರೇರಣೆ ನೀಡಲಾಗುತ್ತಿದ್ದು ಜನರು ಅಧ್ಯಾತ್ಮದತ್ತ ಒಲವು ತೋರಬೇಕೆಂದರು.

ಶಿವಾನಂದ ಮಠದ ಪೂಜ್ಯ ಮಹಾದೇವ ಸರಸ್ವತಿ ಸ್ವಾಮೀಜಿ, ಪ್ರಜಾಪಿತ ಬ್ರಹ್ಮಕುಮಾರಿ ಆಶ್ರಮದ



ಮುಖ್ಯಸ್ಥೆ ಪ್ರಭಾ ಅಕ್ಕ, ಪಿಎಲ್‌ಡಿ ಬ್ಯಾಂಕ್ ಮಾಜಿ ಛೇರಮನ್ ಶಂಕರಗೌಡಾ ಪಾಟೀಲ, ನ್ಯಾಯವಾದಿ ಜಿ.ಬಿ.ಗಿರಿಜನ್ನವರ, ಎಸ್.ಎಫ್.ಹರಕುಣಿ, ಮಹಾಂತೇಶ ತುರಮರಿ, ಮಲ್ಲಿಕಾರ್ಜುನ ಬಡ್ಡಿಮನಿ ಮಹಾಂತೇಶ ಅಕ್ಕಿ, ಶಿವನಗೌಡಾ ಪಾಟೀಲ ಮುಂತಾದವರು ವೇದಿಕೆ ಮೇಲಿದ್ದರು.

ತಾಲೂಕಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಮಹಾಂತೇಶ ತುರಮರಿ, ಖ್ಯಾತ ಚಿಕ್ಕ ಮಕ್ಕಳ ತಜ್ಞ ಡಾ.ಶರಣ–ಕುಮಾರ ಅಂಗಡಿ, ಸರ್ವಧರ್ಮ ಮುಖಂಡ ಬಾಬಣ್ಣ ಸಂಗೊಳ್ಳಿ, ಗಣಾಚಾರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಬಿ.ಬಿ.ಗಣಾಚಾರಿ, ಪತ್ರಕರ್ತ ಮಹಾಂತೇಶ ರೇಶ್ಮಿ, ಪ್ರಗತಿ ಪರ ರೈತ ಮಲ್ಲೇಶಪ್ಪ ದೊಡಮನಿ, ಉದ್ಯಮಿ ಮಹೇಶ ವಾಲಿ, ಸಮಾಜ ಸೇವಕ ಸುನೀಲ ಮರಕುಂಬಿ, ಶಿವಾನಂದ ಬಡ್ಡಿಮನಿ, ನಿವೃತ ಶಿಕ್ಷಕ ದುಂಡಪ್ಪ ಅಕ್ಕಿ, ನ್ಯಾಯವಾದಿ ಆನಂದ ವಾಲಿ, ಕದಳಿ ಮಹಿಳಾ ವೇದಿಕೆ ಜಿಲ್ಲಾಧ್ಯಕ್ಷ್ಯೆ ಶರಣೆ ಪ್ರೇಮಕ್ಕ ಅಂಗಡಿ ಮುಂತಾದವ–ರಿಗೆ 2023 ರ ಓಂ ಶಕ್ತಿ ಮಾತಾ ಶ್ರೀ ಭಗಳಾಂಭಾದೇವಿ ರಾಜ್ಯ ಮಟ್ಟದ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಪತ್ರಕರ್ತ ಮಹಾಂತೇಶ ರಾಜಗೋಳಿ ಸ್ವಾಗತಿಸಿದರು. ಮಹಾಂತೇಶ ರೇಶ್ಮಿ ನಿರೂಪಿಸಿದರು. ಬಸವರಾಜ ದೊಡಮನಿ ವಂದಿಸಿದರು.

ಮುಂಜಾನೆ ಹೋಮ, ಹವನ, ಶ್ರೀದೇವಿಗೆ ವಿಶೇಷ ಪೂಜೆ, ಪ್ರಾಥ–'ರ್ನೆ, ಪಾರಾಯಣ, ಮುತ್ತೈದೆಯ–ರಿಗೆ ಉಡಿ ತುಂಬುವ ಕಾರ್ಯಕ್ರಮ, ಕುಂಭಮೇಳ, ದೇವಿಯ ಭಾವಚಿತ್ರದ ಮೆರವಣಿಗೆ, ಸಾಯಂಕಾಲ ದೀಪೋತ್ಸವ ಜರುಗಿದವು. ಅನ್ನ ಪ್ರಸಾದ ಏರ್ಪಡಿಸಲಾಗಿ–ತ್ತು. ಅಧಿಕ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡಿದ್ದರು. ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

## ಕೆ.ಎಲ್.ಇ ಡೀಮ್ಡ್ ಯೂನಿವರ್ಸಿಟಿ ಎಸ್ಸಿಐಎಂಎಸ್ಟಿ, ತಿರುವನಂತಪುರ ಜೊತೆ ಒಪ್ಪಂದಕ್ಕೆ ಸಹಿ



ಬೆಳಗಾವಿ: ಕೆಎಲ್‌ಇ ಅಕಾಡೆಮಿ ಆಫ್ ಹೈಯರ್ ಎಜುಕೇಶನ್ ಅಂಡ್ ರಿಸರ್ಚ್ (ಕೆಎಲ್‌ಇ ಡೀಮ್ಡ್ ಯೂನಿವರ್ಸಿಟಿ) ಮತ್ತುಶ್ರೀ ಚಿತ್ರ ತಿರುನಲ್ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್ ಅಂಡ್ ಟೆಕ್ನಾಲಜಿ, ಕೇರಳ, ತಿರುವನಂತಪುರ, ರಾಷ್ಟ್ರೀಯ ಪ್ರಾಮುಖ್ಯತೆಯ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಭಾರತ ಸರ್ಕಾರ, ತಿರುವನಂತಪುರಂ, ಕೇರಳದೊಂದಿಗೆ 13–04–2023ರಂದು ಒಪ್ಪಂದಕ್ಕೆಸಹಿ ಹಾಕಿದೆ.

ಈ ಸಹಯೋಗವು ಆರೋಗ್ಯ ವಿಜ್ಞಾನ ಸಂಶೋಧನೆ, ರೋಗನಿರ್ಣಯ ಮತ್ತು ಸಾಧನಗಳು, ಜೈವಿಕ–ವೈದ್ಯಕೀಯ ತಂತ್ರಜ್ಞಾನ ಹಾಗೂ ಕ್ಲಿನಿಕಲ್ ಸ್ಕಿಲ್ ಮತ್ತು ಸಿಮ್ಯುಲೇಶನ್ ಮ್ಯಾನೆಕ್ವಿನ್‌ಗಳ ಅಭಿವೃದ್ಧಿ ಕ್ಷೇತ್ರದಲ್ಲಿ ರಾಷ್ಟ್ರೀಯ ಆದ್ಯತೆಗಳ ಕ್ಷೇತ್ರಗಳಲ್ಲಿ ಬಲಗೊಳ್ಳುತ್ತದೆ.

KLE ಡೀಮ್ಡ್ ವಿಶ್ವವಿದ್ಯಾನಿಲಯದ (KAHER) ಉಪಕುಲಪತಿ ಡಾ. ನಿತಿನ್ ಎಂ ಗಂಗನೆ ಮತ್ತು ಶ್ರೀ ಚಿತ್ರ ತಿರುನಾಳ್ ವೈದ್ಯಕೀಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂಸ್ಥೆ (SCIMST) ನಿರ್ದೇಶಕರು ಡಾ ಸಂಜಯ್ ಬಿಹಾರಿ ಅವರು ರಿಜಿಸ್ಟ್ರಾರ್ ಡಾ..ವಿ.ಎ.ಕೋಠಿವಾಲೆ, ಡಾ.ಮದನ್ ಗೋಡ್ಬೋಲೆ, ಸಂಶೋಧನಾ ಸಲಹೆಗಾರ, ಡಾ ಅಭಿಜಿತ್ ಗೊಗ್ಟೆ ಮತ್ತು ಇತರ ತಂಡದ ಸದಸ್ಯರು ಇದನ್ನು ಸಂಘಟಿಸಿದವರು ಡಾ. ಪ್ರಮೋದ ಎಚ್.ಜೆ. ಇದ್ದರು.

## ಜನರ ಪ್ರೀತಿ ವಿಸ್ವಾಸಕ್ಕೆ ನಾನು ಋಣಿಯಾಗಿದ್ದೇನೆ: ರಾಜುಗೌಡ

ತಾಳಿಕೋಟೆ: ನನ್ನ ಮೇಲೆ ನಾಯಕತ್ವ ಬರವಸೆ ಇಟ್ಟು ಜನರು ತೋರಿಸುತ್ತಿರುವ ಪ್ರೀತಿ ವಿಸ್ವಾಸಕ್ಕೆ ನಾನು ಸದಾ ಚಿರಋಣಿಯಾಗಿದ್ದೇನೆ ನಿಮ್ಮ ಬರವಸೆ ಹುಸಿಗೊಳಿಸದೇ ನಿಮ್ಮ ಸೇವಕನಾಗಿ ಕೆಲಸ ಮಾಡುತ್ತೇನೆಂದು ದೇವರ ಹಿಪ್ಪರಗಿ ಮತಕ್ಷೇತ್ರದ ಜೆ.ಡಿ.ಎಸ್.ಪಕ್ಷದ ಅಭ್ಯರ್ಥಿ ರಾಜುಗೌಡ ಪಾಟೀಲ(ಕುದರಿಸಾಲವಾಡಗಿ) ಅವರು ಹೇಳಿದರು.

ಗಡಿ ಸೋಮನಾಳ ಗ್ರಾಮದಲ್ಲಿ ಜೆಡಿಎಸ್ ಪಕ್ಷದ ವತಿಯಿಂದ ಆಯೋಜಿಸಲಾದ ಜೆಡಿ–ಎಸ್ ಪಕ್ಷದ ಕಾರ್ಯಕರ್ತರ ಸಭೆ ಹಾಗೂ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ನೇತೃತ್ವ ವಹಿಸಿ ಮಾತನಾಡುತ್ತಿದ್ದ ಅವರು ರೈತರ ಪರವಾಗಿ, ಬಡವರ



ಪರವಾಗಿ, ಇರುವಂತಹ ಏಕೈಕ ಪಕ್ಷ ಜೆಡಿಎಸ್ ಪಕ್ಷವಾಗಿದೆ ಮಹಿಳೆಯರಿಗೆ, ನಿರುದ್ಯೋಗಿ ಯುವಕರಿಗೆ ಹಲವಾರು ಯೋಜನೆಗಳನ್ನು ಜಾರಿಗೆ ತಂದು ಅನುಷ್ಠಾನಗೊಳಿಸುವಂತಹ ಕಾರ್ಯ ಮಾಜಿ ಮುಖ್ಯಮಂತ್ರಿ ಕುಮಾರಣ್ಣ ಅವರು ಮಾಡಿದ್ದಾರೆ ಪ್ರತಿ ರೈತರಿಗೆ ಬಿತ್ತನೆಗೆ ಬೀಜ ಖರೀದಿಗಾಗಿ 10 ಸಾವಿರ ರೂ. ವೃದ್ದರಿಗೆ 5 ಸಾವಿರ ರೂ. ಮಹಿಳಾ ಸ್ವಸಾಯ ಸಂಘಗಳ ಸಾಲ ಮನ್ನಾ ಒಳಗೊಂಡು ಪ್ರತಿಯೊಂದು ಗ್ರಾಂ ಪಂಚಾಯ್ತಿ ವ್ಯಾಪ್ತಿಯಲ್ಲಿ ಹೈಟೆಕ್ ಆಸ್ಪತ್ರೆ, ಹೈಟೆಕ್ ಶಾಲೆ ಗಳನ್ನು ಪ್ರಾರಂಬಿಸುವ ಯೋಜನೆಯನ್ನು ಪ್ರನಾಳಿಕೆಯಲ್ಲಿ ಅಳವಡಿಸಿದ್ದಾರೆ ಬಡವ–ರಿಗೆ ಉಚಿತವಾಗಿ ಗ್ಯಾಸ ಕೊಡುತ್ತೇವೆಂದ ಬಿಜೆಪಿ ಪಕ್ಷದವರು ಕನಿಷ್ಠ ಪಕ್ಷ ಅಗ್ಗದ ದರದಲ್ಲಿ ಸಿಗಬೇಕಾದ ಗ್ಯಾಸ್ ಸಿಲೇಂಡರ್ ಇಂದು ದುಭಾ–ರಿಯಾಗಿ ಬಡವರಿಗೆ ಸಂಕಷ್ಟಕ್ಕೆ ನೂಕುವಂತೆ ಬಿಜೆಪಿ ಸರ್ಕಾರ ಮಾಡಿದ್ದು ಮುಂದಿನ ದಿನಗಳಲ್ಲಿ ಜೆಡಿಎಸ್ ಅಧಿಕಾರಕ್ಕೆ ಬಂದ 24 ಗಂಟೆಯೊಳಗೆ ಅರ್ಧದಷ್ಟು ನೇರವಾಗಿ ಸಬ್ಸೀಡಿ ಮೂಲಕ ಬಡವರಿಗೆ ಮುಟ್ಟಿಸುವಂತಹ ಕಾರ್ಯವಾಗಲಿದೆ ಎಂದ ಅವರು ಕಾಂಗ್ರೇಸ್‌ನವರು 60 ವರ್ಷಗಳ ಕಾಲ ಆಳ್ವಿಕೆಯನ್ನು ಮಾಡಿದ್ದರೂ ಕೂಡಾ ಜನರ ವಿಸ್ವಾಸವನ್ನು ಕಳೆದುಕೊಂಡಿದ್ದಾರೆ ಹೀಗಾಗಿ ಗ್ಯಾರೇಂಟಿ ಕಾರ್ಡ ಹಂಚುವದರ ಮೂಲಕ ಜನರನ್ನು ವಂಚಿಸಲು ಹೊರಟದ್ದಾರೆ ಕಾಂಗ್ರೇಸ್ ಮತ್ತು ಬಿಜೆಪಿ ಪಕ್ಷ ಸುಳ್ಳಿನ ಬರವಸೆಗಳನ್ನು ಕಟ್ಟಿಕೊಂಡು ಹೊರಟದ್ದು ಆದರೆ ಮತದಾರರು ಎಲ್ಲವನ್ನು ಗಮನಿಸಿದ್ದಾರೆ ಈ ಭಾರಿ ಜೆಡಿಎಸ್ ಪಕ್ಷಕ್ಕೆ ಅಧಿಕಾರ ಸಿಗುವದು ನಿಶ್ಚಿತವಾಗಿದೆ ಎಂದ ಅವರು ಜನರು ನನ್ನ ಮೇಲೆ ಇಟ್ಟಿರುವ ಪ್ರೀತಿ ಅಗಾದವಾದುದ್ದಾಗಿದ್ದು ನಿಮ್ಮ ಸೇವಕನಾಗಿ ನಾನು ಹಗಲಿರುಳು ಶ್ರಮಿಸುತ್ತೇನೆಂದರು.

# ಸಮಾನತೆ ಸಾರಿದ ಸಂವಿಧಾನ ಶಾಶ್ವತ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ


ಬೆಳಗಾವಿ: ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಮಾನವತಾವಾದಿ. ದೇಶಕ್ಕೆ ಅವರ ಕೊಡುಗೆ ಅಪಾರವಾಗಿದೆ. ಅವರು ಬರೆದ ಸಂವಿಧಾನ ಶಾಶ್ವತವಾಗಿದ್ದು, ಭಾರತದಲ್ಲಿರುವ ಎಲ್ಲರಿಗೂ ಸಮಾನತೆಯನ್ನು ಒದಗಿಸುತ್ತದೆ ಎಂದು ಜಿಲ್ಲಾಧಿಕಾರಿ ನಿತೇಶ್ ಕೆ. ಪಾಟೀಲ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಾನಗರ ಪಾಲಿಕೆಯ ಸಂಯುಕ್ತಾಶ್ರಯದಲ್ಲಿ ನಗರದ ಡಾ. ಬಿ. ಆರ್. ಅಂಬೇಡ್ಕರ್ ಉದ್ಯಾನವನದಲ್ಲಿ ಶುಕ್ರವಾರ (ಏ.14) ಏರ್ಪಡಿಸಲಾಗಿದ್ದ ಡಾ. ಡಾ. ಬಿ. ಆರ್. ಅಂಬೇಡ್ಕರ್ ಅವರ 132 ನೇ ಜನ್ಮದಿನಾಚರಣೆಯ ಸಮಾರಂಭದಲ್ಲಿ ಮಾತನಾಡಿದರು.

ಬಾಬಾಸಾಹೇಬ್ ಅಂಬೇಡ್ಕರ್ ಅವರ ಆಶಯದಂತೆ ಉತ್ತಮ ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಉನ್ನತ ಶಿಕ್ಷಣ ಪಡೆಯಲು ಪ್ರೋತ್ಸಾಹಿಸಲಾಗುತ್ತಿದೆ. ಹೀಗೇ ಅವರ ವಿಚಾರ ಚಿಂತನೆಗಳನ್ನು ಅಳವಡಿಸಿಕೊಂಡು ಅವರ ಮಾರ್ಗ ದರ್ಶನದಲ್ಲಿ ಎಲ್ಲರೂ ನಡೆಯೋಣ ಎಂದು ಜಿಲ್ಲಾಧಿಕಾರಿ ನಿತೇಶ್ ಕೆ. ಪಾಟೀಲ್ ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೋಯರ್ ಅವರು ಮಾತನಾಡಿ, ಬಾಬಾಸಾಹೇಬ್ ಅಂಬೇಡ್ಕರ್ ಅವರು, ವಿವಿಧ ಕಾಯ್ದೆ ಗಳನ್ನು ಜಾರಿಗೆ ತಂದು ಮಹಿಳೆಯರಿಗೆ ಸಮಾಜದಲ್ಲಿ ಉನ್ನತ ಸ್ಥಾನಮಾನಗಳು, ಶಿಕ್ಷಣ ಕೊಡಿಸುವುದರ ಮೂಲಕ ಸಮಾಜದ ಸಮಗ್ರ ಅಭಿವೃದ್ಧಿಗೆ ಶ್ರಮಿಸಿದವರು ಎಂದು ಹೇಳಿದರು.

ಸಮಾನತೆಗಾಗಿ ಅನೇಕ



ಹೋರಾಟಗಳನ್ನು ಮಾಡಿ ಸಮಾಜದಲ್ಲಿ ಸಮಾನತೆಯನ್ನು ಕೊಟ್ಟು ಹೋಗಿದ್ದಾರೆ. ನಾವೆಲ್ಲರೂ ಸಮಾನತೆಯ ಚಿಂತನೆಯನ್ನು ಅಳವಡಿಸಿಕೊಂಡು ಅಂಬೇಡ್ಕರ್ ಅವರ ವಿಚಾರಚಿಂತನೆ, ಜೀವನಶೈಲಿ, ತತ್ವ ಸಿದ್ಧಾಂತಗಳನ್ನು ಅಳವಡಿಸಿಕೊಳ್ಳಬೇಕಿದೆ ಎಂದು ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಮುಂಬೈ ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕರಾದ ಕೆ.ಡಿ. ಮಾಂತೇಶ್ರೀ ಅವರು ಉಪನ್ಯಾಸ ನೀಡಿದರು.

ತಮ್ಮ ಜೀವನವನ್ನು ದೇಶದ ಜನತೆಗಾಗಿ ಮೀಸಲಿಟ್ಟು, ಅನೇಕ ಹೋರಾಟ ನಡೆಸಿ ಸಮಾನತೆಯನ್ನು ಕೊಟ್ಟ ಅವರ ಕೊಡುಗೆ ಅಪಾರವಾದದ್ದು, ಅವರು 32 ಪದವಿ ಪಡೆದು, ಭಾರತದಲ್ಲಿ ಅಷ್ಟೇ ಅಲ್ಲದೆ ಹೊರ ದೇಶಗಳಲ್ಲಿ ಉನ್ನತ ವಿದ್ಯಾಭ್ಯಾಸ ಮಾಡಿದ್ದಾರೆ ಎಂದು ಮುಂಬೈ ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕರಾದ ಕೆ.ಡಿ. ಮಾಂತೇಶ್ರೀ ಅವರು ಹೇಳಿದರು.

ಭಾರತದಲ್ಲಿ ಅನೇಕ ಹೋರಾಟ ಚಳುವಳಿಗಳ ಮೂಲಕ ದಲಿತರ ಮೇಲಾಗುವ ಅನೇಕ ಅನ್ಯಾಯಗಳನ್ನು ತಡೆದು ಎಲ್ಲರನ್ನು ಸಮಾನರಂತೆ ಕಾಣಲು ಭಾರತಕ್ಕೆ ಶ್ರೇಷ್ಠವಾದ ಸಂವಿಧಾನವನ್ನು ಕೊಟ್ಟವರು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಪೊಲೀಸ್ ಆಯುಕ್ತರಾದ ಡಾ. ಎಂ ಬಿ. ಬೋರಲಿಂಗಯ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಸಂಜೀವ್ ಎಂ. ಪಾಟೀಲ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ಬಸವರಾಜ ಕುರಿಹುಲಿ ಮತ್ತಿತರರು ಉಪಸ್ಥಿತರಿದ್ದರು.

ಇದಕ್ಕೂ ಮುಂಚೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೇರಿದಂತೆ ಎಲ್ಲ ಹಿರಿಯ ಅಧಿಕಾರಿಗಳು ನಗರದ ಅಂಬೇಡ್ಕರ್ ಉದ್ಯಾನದಲ್ಲಿರುವ ಡಾ.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.

ನಂತರ ಅಂಬೇಡ್ಕರ್ ಭಾವಚಿತ್ರದ ಮೆರವಣಿಗೆಗೆ ಚಾಲನೆ ನೀಡಿದರು. ನಗರದ ಪ್ರಮುಖ ಬೀದಿಗಳಲ್ಲಿ ಸಂಚ–ರಿಸಿದ ಮೆರವಣಿಗೆಯು ಅಂಬೇಡ್ಕರ್ ಉದ್ಯಾನದಲ್ಲಿ ಸಮಾರೋಪಗೊಂಡಿತು.

ದಲಿತ ಸಂಘಟನೆಗಳ ಮುಖಂಡರಾದ ಮಲ್ಲೇಶ್ ಚೌಗಲೆ, ಪೊಲೀಸ್ ಆಯುಕ್ತರಾದ ಡಾ. ಎಂ ಬಿ. ಬೋರಲಿಂಗಯ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಸಂಜೀವ್ ಎಂ. ಪಾಟೀಲ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾ–ರಿಗಳಾದ ಬಸವರಾಜ ಕುರಿಹುಲಿ ಮತ್ತಿತರರು ಉಪಸ್ಥಿತರಿದ್ದರು.

## ವಿಧಾನಸಭೆ ಚುನಾವಣಾ ವೆಚ್ಚ ವೀಕ್ಷಕರ ಸಭೆ

# ಚುನಾವಣಾ ಅಕ್ರಮಗಳ ಮೇಲೆ ಹದ್ದಿನಕಣ್ಣು: ನ್ಯಾಯಸಮ್ಮತ ಚುನಾವಣೆ–ನಮ್ಮ ಜವಾಬ್ದಾರಿ

ಬೆಳಗಾವಿ: ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಸುವ ನಿಟ್ಟಿನಲ್ಲಿ ಬೆಳಗಾವಿ ಜಿಲ್ಲೆಗೆ ನಿಯೋಜಿತಗೊಂಡಿರುವ ಎಲ್ಲ 18 ಮತಕ್ಷೇತ್ರಗಳ ಚುನಾವಣಾ ವೆಚ್ಚ ವೀಕ್ಷಕರು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಉನ್ನತ ಮಟ್ಟದ ಅಧಿಕಾರಿಗಳ ಜತೆ ಸಭೆ ನಡೆಸಿದರು.

ಸುವರ್ಣ ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಶನಿವಾರ (ಏ.15) ಸಭೆ ನಡೆಯಿತು.

ಬೆಳಗಾವಿ ಗ್ರಾಮೀಣ ಮತಕ್ಷೇತ್ರದ ವೆಚ್ಚ ವೀಕ್ಷಕ ಸುಬೋಧ ಸಿಂಗ್ ಮಾತನಾಡಿ, ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ಈಗಾಗಲೇ ನಿಯೋಜಿಸಲಾಗಿರುವ ವಿವಿಧ ತಂಡಗಳು ಮತ್ತಷ್ಟು ಚುರುಕಿನಿಂದ ಕೆಲಸ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಆದಾಯ ತೆರಿಗೆ, ರೈಲ್ವೆ, ಅಬಕಾರಿ ಸೇರಿದಂತೆ ಸಂಬಂಧಿಸಿದ ಎಲ್ಲ ಇಲಾಖೆಯ ಅಧಿಕಾ–ರಿಗಳ ಜತೆ ಚರ್ಚಿಸಿ ಅಗತ್ಯವಾದ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

ಇದೇ ವೇಳೆ ಮಾತನಾಡಿದ ವಿವಿಧ ಮತಕ್ಷೇತ್ರಗಳ ವೆಚ್ಚ ವೀಕ್ಷಕರು ಮಾತನಾಡಿ, ಚುನಾವಣಾ ಅಕ್ರಮ ಮತ್ತು ಮತದಾರ–ರಿಗೆ ಆಮಿಷ ಒಡ್ಡುವುದನ್ನು ತಡೆಗಟ್ಟಲು ಎಲ್ಲ ರೀತಿಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಸಂದೇಹಾಸ್ಪದ ಡಿಜಿಟಲ್ ಹಣಕಾಸು ವ್ಯವಹಾರಗಳ ಕುರಿತು ನಿಗಾವಹಿಸಬೇಕು. ಇದಕ್ಕೆ ಸಂಬಂಧಿಸಿದ ಮಾಹಿತಿಯನ್ನು ಚುನಾವಣಾಧಿಕಾರಿಗಳು ಹಾಗೂ ವೀಕ್ಷಕರಿಗೆ ಒದಗಿಸಬೇಕು ಎಂದು ತಿಳಿಸಿದರು.

**ಚುನಾವಣಾ ಅಕ್ರಮ ತಡೆಗೆ ಕಟ್ಟುನಿಟ್ಟಿನ ಕ್ರಮ–ಜಿಲ್ಲಾಧಿಕಾರಿ ನಿತೇಶ್ ಪಾಟೀಲ:**

ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು, ನಿಷ್ಪಕ್ಷಪಾತ ರೀತಿಯಲ್ಲಿ ಚುನಾವಣೆ ನಡೆಸುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಕೈಗೊಳ್ಳಲಾಗಿರುವ ಕ್ರಮಗಳ ಕುರಿತು ಮಾಹಿತಿಯನ್ನು ನೀಡಿದರು.

ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ರಚಿಸಲಾಗಿರುವ ವಿವಿಧ ತಂಡಗಳು, ಚೆಕ್ ಪೋಸ್ಟ್, ಇದುವರೆಗೆ ವಶಪಡಿಸಿಕೊಳ್ಳಲಾಗಿರುವ ವಸ್ತುಗಳು ಸೇ–ರಿದಂತೆ ಎಲ್ಲ ಮಾಹಿತಿಯನ್ನು ನೀಡಿದರು.

ಚುನಾವಣಾ ಅಕ್ರಮಗಳ ಮೇಲೆ ನಿಗಾ ವಹಿಸಲು ಅನುಕೂಲವಾಗುವಂತೆ ಜಿಲ್ಲೆಯಲ್ಲಿ ಒಟ್ಟಾರೆ 58 ಎಫ್.ಎಸ್.ಟಿ., 66 ಎಸ್.ಎಸ್.ಟಿ.; 18 ವಿ.ವಿ.ಟಿ ಹಾಗೂ 51



ವಿಡಿಯೋ ಸರ್ವೇಲನ್ಸ್ ತಂಡಗಳನ್ನು ರಚಿಸಲಾಗಿದೆ. ಈ ಎಲ್ಲ ತಂಡಗಳು ಮಾದರಿ ನೀತಿಸಂಹಿತೆ ಜಾರಿಗೆ ಬಂದ ದಿನದಿಂದಲೇ ಕಾರ್ಯಪ್ರವೃತ್ತಗೊಂಡಿವೆ.

**11.50 ಕೋಟಿ ನಗದು ವಶ:**

ಚುನಾವಣೆ ಹಿನ್ನೆಲೆಯಲ್ಲಿ ಈ ಬಾರಿ ಒಟ್ಟು 11,50,91,970 ನಗದು ಹಾಗೂ 53.67 ಲಕ್ಷ ರೂಪಾಯಿ ಮೊತ್ತದ ಮದ್ಯ ವಶಪಡಿಸಿಕೊಳ್ಳಲಾಗಿದೆ.

ಮಾದರಿ ನೀತಿಸಂಹಿತೆ ಮುಂಚೆಯಿಂದ ಹಿಡಿದು ಇಲ್ಲಿಯವರೆಗೆ ನಗದು, ವಾಹನ ಹಾಗೂ ಇತರೆ ವಸ್ತುಗಳು ಸೇರಿದಂತೆ ಒಟ್ಟಾರೆ 19 ಕೋಟಿ ರೂಪಾಯಿ ಮೊತ್ತದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ವಿವರಿಸಿದರು. ಕೀಮ್ ಆ್ಯಪ್ ಮೂಲಕ ಪ್ರತಿಯೊಂದು ಹಣ ಸಾಗಾಣಿಕೆಗಳ ಮೇಲೆ ನಿಗಾ ವಹಿಸಲಾಗಿದೆ.

**2217 ಮತಗಟ್ಟೆಗಳಲ್ಲಿ ವೆಬ್ ಕ್ಯಾಸ್ಟಿಂಗ್:**

ರಾಜ್ಯದಲ್ಲಿಯೇ ಅತೀ ಹೆಚ್ಚು ಅಂದರೆ 2217 ಮತಗಟ್ಟೆಗಳಲ್ಲಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗುತ್ತಿದೆ. ಮತಗಟ್ಟೆಯ ಸೂಕ್ಷ್ಮತೆ ಆಧರಿಸಿ ಹದಿನೆಂಟು ಮತಕ್ಷೇತ್ರಗಳಿಂದ 2217 ಮತಗಟ್ಟೆಗಳನ್ನು ಆಯ್ಕೆ ಮಾಡಿಕೊಂಡು ವೆಬ್ ಕಾಸ್ಟಿಂಗ್ ವ್ಯವಸ್ಥೆ ಕಲ್ಪಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ವಿವರಿಸಿದರು.

ಸಶಸ್ತ್ರ ಸೀಮಾ ಬಲದ 11 ಕಂಪೆನಿಗಳು ಈಗಾಗಲೇ ಜಿಲ್ಲೆಗೆ ಆಗಮಿಸಿದ್ದು, ಮತದಾರರಲ್ಲಿ ವಿಶ್ವಾಸ ಮೂಡಿಸಲು ಪಥ–ಸಂಚಲನ ಕೈಗೊಳ್ಳಲಾಗಿರುತ್ತದೆ.

ಜಿಲ್ಲೆಯಲ್ಲಿ ಒಟ್ಟಾರೆ 4434 ಮತಗಟ್ಟೆಗಳಿದ್ದು, ಏಪ್ರಿಲ್ 10 ಕ್ಕೆ ಸ್ವೀಕೃತವಾದ ಅರ್ಜಿಗಳ ಪ್ರಕಾರ ಅಂತಿಮ ಮತದಾರರ ಪಟ್ಟಿಯನ್ನು ಸಿದ್ಧಪಡಿಸಲಾಗುವುದು.

ಬೆಳಗಾವಿ ಪೊಲೀಸ್ ಆಯುಕ್ತರಾದ ಡಾ.ಎಂ.ಬಿ.ಬೋರಲಿಂಗಯ್ಯ, ಬೆಳಗಾವಿ ಅತೀ ದೊಡ್ಡ ಜಿಲ್ಲೆಯಾಗಿದ್ದು, ಹದಿನೆಂಟು ಮತಕ್ಷೇತ್ರಗಳನ್ನು ಒಳಗೊಂಡಿರುತ್ತದೆ.

ಪೊಲೀಸ್ ಆಯುಕ್ತಾಲಯದ ವ್ಯಾಪ್ತಿಯಲ್ಲಿ ಮೂರು ಮತಕ್ಷೇತ್ರಗಳು ಮತ್ತು ಯಮಕನಮರಡಿ ಕ್ಷೇತ್ರದ ಭಾಗಶಃ ಪ್ರದೇಶಗಳು ಬರುತ್ತವೆ. ಸಂಬಂಧಿಸಿದ ಮತಕ್ಷೇತ್ರಗಳ ಚುನಾವಣಾಧಿಕಾರಿಗಳ ಜತೆ ಸಮನ್ವಯಕ್ಕಾಗಿ ತಲಾ ಒಬ್ಬ ಎಸಿಪಿ ಗಳನ್ನು ನಿಯೋಜಿಸಲಾಗಿದೆ.

**ಚೆಕ್ ಪೋಸ್ಟ್ ಗಳಲ್ಲಿ ತೀವ್ರ ತಪಾಸಣೆ:**

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸಂಜೀವ ಪಾಟೀಲ, 21 ಅಂತರರಾಜ್ಯ ಚೆಕ್ ಪೋಸ್ಟ್, 22 ಅಂತರ ಜಿಲ್ಲಾ ಚೆಕ್ ಪೋಸ್ಟ್ ಮತ್ತು 12 ಜಿಲ್ಲೆಗೊಳಗೆ ಚೆಕ್ ಪೋಸ್ಟ್ ಸ್ಥಾಪಿಸಲಾಗಿದೆ.

ಎಲ್ಲ ಚೆಕ್ ಪೋಸ್ಟ್ ಗಳಲ್ಲೂ ತೀವ್ರ ನಿಗಾ ವಹಿಸಲಾಗಿದ್ದು, ಇದುವರೆಗೆ ಗಮನಾರ್ಹ ಪ್ರಮಾಣದಲ್ಲಿ ದಾಖಲೆರಹಿತ ನಗದು, ಅಕ್ರಮ ವಸ್ತುಗಳು ಹಾಗೂ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಸಭೆಯಲ್ಲಿ ವಿವರಿಸಿದರು.

ಅಕ್ರಮಗಳನ್ನು ತಡೆಗಟ್ಟುವ ದೃಷ್ಟಿಯಿಂದ ಬಲ್ಕ್ ಕೊರಿಯರ್ ಹಾಗೂ ಪೆಟ್ರೋಲ್ ಬಂಕ್ ಗಳ ಮೇಲೆ ನಿಗಾವಹಿಸಲಾಗಿದ್ದು, ಎಲ್ಲ ಚೆಕ್ ಪೋಸ್ಟ್ ಗಳಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸಲಾಗಿದೆ ಎಂದರು.

ಸೂಕ್ಷ್ಮ ಮತ್ತು ದುರ್ಬಲ ವರ್ಗ ಹೆಚ್ಚಾಗಿರುವ ಮತಗಟ್ಟೆಗಳಿಗೆ ಈಗಾಗಲೇ ಹಲವಾರು ಸುತ್ತು ಭೇಟಿ ನೀಡಿ ಜನರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲಾಗಿದೆ ಎಂದು ಡಾ.ಸಂಜೀವ ಪಾಟೀಲ ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಮಾದರಿ ನೀತಿಸಂಹಿತೆ ನೋಡಲ್ ಅಧಿಕಾರಿ ಹರ್ಷಲ್ ಭೋಯರ್, ಆದ–ಾಯ ತೆರಿಗೆ ಇಲಾಖೆಯ ಹಿರಿಯ ಅಧಿಕಾರಿ ಶಿಂಧೆ, ಸಾಂಬ್ರಾ ವಿಮಾನ ನಿಲ್ದಾಣ ನಿರ್ದೇಶಕರಾದ ರಾಜೇಶ್ ಕುಮಾರ್ ಮೌರ್ಯ ಸೇರಿದಂತೆ ವಿವಿಧ ಇಲಾಖೆಗಳ ಉನ್ನತಮಟ್ಟದ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

# ಐತಿಹಾಸಿಕ ಲೀಡ್ ಆಗಲು ಕಾರ್ಯಕರ್ತರು ಒಂದಾಗಿ, ಒಗ್ಗಟ್ಟಾಗಿ ಶ್ರಮಿಸಿ: ಬಾಲಚಂದ್ರ ಜಾರಕಿಹೊಳಿ

ಗೋಕಾಕ : ಮೇ 10 ರಂದು ನಡೆಯುವ ವಿಧಾನಸಭೆ ಚುನಾವಣೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಲೀಡ್ ನೀಡಲು ಪ್ರತಿ ಮತಗಟ್ಟೆಗಳ ಪ್ರಮುಖರು ಹಾಗೂ ಮುಖಂಡರು ಒಗ್ಗಟ್ಟಾಗಿ ಶ್ರಮಿಸುವಂತೆ ಶಾಸಕ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

ಶನಿವಾರದಂದು ನಗರದ ಹೊರ ವಲಯದಲ್ಲಿರುವ ಗೋಕಾಕ ಸಪ್ಲಾಯರ್ಸ್ ಭವನದಲ್ಲಿ ಜರುಗಿದ ಅರಭಾವಿ ಕ್ಷೇತ್ರದ 281 ಮತಗಟ್ಟೆಗಳ ಪ್ರಮುಖರ ಹಾಗೂ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು, ಮತಗಟ್ಟೆಗಳ ಮೂಲಕ ಕೆಲಸ ನಿರ್ವಹಿಸಿದರೆ ನಮ್ಮ ಚುನಾವಣೆಗೆ ಹೆಚ್ಚಿನ ಅನುಕೂಲವಾಗುತ್ತದೆ ಎಂದು ಹೇಳಿದರು.

2019 ರಲ್ಲಿ ನಡೆದ ಗೋಕಾಕ ವಿಧಾನಸಭಾ ಉಪಚುನಾವಣೆಯಲ್ಲಿ ನಮ್ಮ ಕ್ಷೇತ್ರದ ಸುಮಾರು ಸಾವಿರ ಜನರನ್ನು ಮತಗಟ್ಟೆಗಳ ಪ್ರಮುಖರನ್ನಾಗಿ ನಿಯೋಜಿಸಿ ರಮೇಶ ಜಾರಕಿಹೊಳಿ ಅವರ ಗೆಲುವಿಗೆ ಕಾರಣಿಕರ್ತರಾಗಿದ್ದಾರೆ. ಅದೇ ಮಾದರಿಯಲ್ಲಿ ನಾವು ಚುನಾವಣೆಯನ್ನು ಎದು–ರಿಸಬೇಕಾಗಿದೆ. ಇದರಿಂದ ಸ್ಥಳೀಯ ಮಟ್ಟದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮತ ಬೀಳಲು ಅನುಕೂಲವಾಗುತ್ತದೆ. ಪ್ರತಿ ಮತಗಟ್ಟೆಯಿಂದ 15 ರಿಂದ 20 ಜನ ಪ್ರಮುಖರನ್ನು ನಿಯೋಜಿಸಿದರೆ ಪ್ರಚಾರಕ್ಕೆ ಹೆಚ್ಚಿನ ಅನುಕೂಲವಾಗುತ್ತದೆ. ಪೇಜ್ ಪ್ರಮುಖರ ಯಾದಿಯನ್ನು ಸಹ ಅತೀ ಬೇಗನೆ ಸಿದ್ಧಪಡಿಸುವಂತೆ ಅವರು ತಿಳಿಸಿದರು.

ಈ ಸಾರ್ವತ್ರಿಕ ಚುನಾವಣೆಯನ್ನು ನಾವು ಅಧಿಕ



ಅಂತರದಲ್ಲಿ ಗೆಲ್ಲಬೇಕಾಗಿದೆ. ಕಾರ್ಯಕರ್ತರು ತಮ್ಮ ವೈಯಕ್ತಿಕ ಕೆಲಸಗಳನ್ನು ಬದಿಗಿಟ್ಟು 20 ದಿನಗಳವರೆಗೆ ನಮಗಾಗಿ ನಿಮ್ಮ ಸಮಯವನ್ನು ಮೀಸಲಿಡಬೇಕು. ಎದುರಾಳಿ ಅಭ್ಯರ್ಥಿ ಯಾರೇ ಆದರೂ ಅದಕ್ಕೆ ತಲೆ ಕೆಡಿಸಿಕೊಳ್ಳಬೇಡಿ. ಕೇವಲ ಐತಿಹಾಸಿಕ ಜಯ ಒಂದೇ ನಿಮ್ಮ ಮುಂದಿರಲಿ. ಆ ಗುರಿಯನ್ನು ತಲುಪಲು ಮತದಾರರ ಮನೆ ಮನೆಗೆ ತೆರಳಿ ಬಿಜೆಪಿ ಕಾರ್ಯಕ್ರಮಗಳ ಯೋಜನೆ ಯನ್ನು ಪ್ರಚಾರಪಡಿಸುವಂತೆ ಹೇಳಿದರು.

ಈಗಾಗಲೇ ಕೆಲವು ಎಲೆಕ್ಟ್ರಾನಿಕ್ಸ್ ಮಾಧ್ಯಮಗಳು ಚುನಾವಣೆಯ ಸಮೀಕ್ಷೆಗಳನ್ನು ಮಾಡಿವೆ. ಅದರಲ್ಲಿ ಬಿಜೆಪಿಗೆ ಹೆಚ್ಚಿನ ಸ್ಥಾನಗಳನ್ನು ತೋ–ರಿಸಿದ್ದಾರೆ. ಚುನಾವಣೆಗೆ ಕೆಲವೇ ದಿನಗಳು ಬಾಕಿ ಉಳಿದಿವೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಾಧನೆಗಳನ್ನು ತಿಳಿಸಬೇಕಾಗಿದೆ. ನಾನು ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳನ್ನು ಸಹ ಜನರಿಗೆ ಮನವರಿಕೆ ಮಾಡಿಕೊಡಲು ಕಾರ್ಯಕರ್ತರಿಗೆ ಶಾಸಕ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

ಯುವ ಧುರೀಣ ಸರ್ವೋತ್ತಮ ಜಾರಕಿಹೊಳಿ, ಅರಭಾವಿ ಮಂಡಲ ಅಧ್ಯಕ್ಷ ಮಹಾದೇವ ಶೆಕ್ಕಿ, ವಿಸ್ತಾರಕ ವೆಂಕಟ ಲಾಳಿ, ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಪರಸಪ್ಪ ಬಬಲಿ, ಮಹಾಂತೇಶ ಕುಡಚಿ, ವಿವಿಧ ಮೋರ್ಚಾಗಳ ಪದಾಧಿಕಾರಿಗಳು, ಮತಗಟ್ಟೆಗಳ ಪ್ರಮುಖರು ಹಾಗೂ ಕ್ಷೇತ್ರದ ಸಾವಿರಾರು ಕಾರ್ಯಕರ್ತರು, ಮುಖಂಡರು ಉಪಸ್ಥಿತರಿದ್ದರು.

ತುಕ್ಕಾನಟ್ಟಿ, ಹಳ್ಳೂರ, ವಡೇರಹಟ್ಟಿ, ಮೆಳವಂಕಿ, ಕೌಜಲಗಿ, ಯಾದವಾಡ ಜಿಲ್ಲಾ ಪಂಚಾಯತಗಳು, ಮೂಡಲಗಿ ಪುರಸಭೆ, ನಾಗನೂರ, ಕಲ್ಲೋಳಿ, ಅರಭಾವಿ ಪಟ್ಟಣ ಪಂಚಾಯತಿಗಳ ವ್ಯಾಪ್ತಿಯ ಎಲ್ಲ ಬಿಜೆಪಿ ಮುಖಂಡರು, ಕಾರ್ಯಕರ್ತರ ಸಭೆಗಳನ್ನು ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಪ್ರತ್ಯೇಕವಾಗಿ ನಡೆಸಿದರು.

# ಬಲಿಷ್ಠ ಪ್ರಜಾಪ್ರಭುತ್ವ ರಾಷ್ಟ್ರ ನಿರ್ಮಾಣಕ್ಕೆ ಪ್ರತಿಯೊಬ್ಬರ ಮತದಾನ ಅಗತ್ಯ: ಇಒ ನಿಂಗಪ್ಪ ಮಸಳಿ




ಬೆಳಗಾವಿ: ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ ಬಲಿಷ್ಠ ಪ್ರಜಾಪ್ರಭುತ್ವ ರಾಷ್ಟ್ರ ರೂಪಿಸಲು ಪ್ರತಿಯೊಬ್ಬರು ಮತದಾನ ಮಾಡಬೇಕು ಎಂದು ಕಾಗವಾಡ ತಾಪಂ ಇಒ ನಿಂಗಪ್ಪ ಮಸಳಿ ಹೇಳಿದರು.

ಕಾಗವಾಡ ತಾಲೂಕಿನ ಐನಾಪೂರ ಪಟ್ಟಣದಲ್ಲಿ ಶನಿವಾರ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಳ್ಳಲಾದ ಜಾಗೃತಿ ಜಾಥಾಗೆ ಚಾಲನೆ ನೀಡಿ ಮಾತನಾಡಿದರು.

ಪ್ರತಿಯೊಬ್ಬರೂ ತಮ್ಮ ಅಮೂಲ್ಯವಾದ ಮತ ಚಲಾಯಿಸಬೇಕು. ಆಮಿಷಗಳಿಗೆ ಬಲಿಯಾಗದೆ ನೈತಿಕ ಮತದಾನ ಮಾಡಬೇಕು. ಸುತ್ತ–ಮುತ್ತಲಿನ ಜನರಿಗೂ ಮತದಾನದ ಮಹತ್ವ ತಿಳಿಸಿಕೊಡಬೇಕು ಎಂದು ಸಲಹೆ ನೀಡಿದರು.

ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಸಾರ್ವಜನಿಕರಿಗೆ ಮತದಾನದ ಕುರಿತು ಜಾಗೃತಿ ಮೂಡಿಸಲಾಯಿತು. ನನ್ನ ಮತ ಮಾರಾಟಕ್ಕಿಲ್ಲ, ನನ್ನ ಮತ ನನ್ನ ಹಕ್ಕು, ನೈತಿಕ ಮತದಾನ ಮಾಡಿ ಹೀಗೆ ಮತದಾನ ಜಾಗೃತಿ ಸಂಬಂದಿಸಿದಂತೆ ಘೋಷಣೆಗಳ ನಾಮ ಫಲಕ ಪ್ರದರ್ಶಿಸಿದರು.

ಸಹಾಯಕ ನಿರ್ದೇಶಕರಾದ (ಗ್ರಾಉ) ಗೋಪಾಲ ಮಾಳಿ, ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಸುರೇಖಾ ಬಾಗಲಕೋಟ, ಆಶಾ ಅಂಗನವಾಡಿ ಕಾರ್ಯಕರ್ತರು, ತಾಲೂಕು ಮಟ್ಟದ ವಿವಿಧ ಇಲಾಖೆ ಸಿಬ್ಬಂದಿಗಳು ಭಾಗಿಯಾಗಿದ್ದರು.

# ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ಪ್ರಚಾರ ವಾಹನಕ್ಕೆ ವಿಪಕ್ಷ ನಾಯಕ ಸಿದ್ದರಾಮಯ್ಯ ಚಾಲನೆ

ಬೆಳಗಾವಿ: ರಾಜ್ಯದಲ್ಲಿ ಈ ಭಾರೀ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ತರಬೇಕೆಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಅವರು ಪ್ರಚಾರಕ್ಕಾಗಿ ನೂತನ ವಾಹನ ಸಿದ್ದಪಡಿಸಿದ್ದು, ಈ ವಾಹನ ಬೆಳಗಾವಿ ಜಿಲ್ಲೆಯ 18 ಮತಕ್ಷೇತ್ರದಲ್ಲಿ ಪ್ರಚಾರಕ್ಕಾಗಿ ಬಳಸಲಾಗುವುದು ಎಂದು ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಹೇಳಿದರು.

ನಗರದ ಕಾಂಗ್ರೆಸ್ ಭವನದ ಆವರಣದಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿಯವರು ಸಿದ್ದಪಡಿಸಿದ ನೂತನ ಪ್ರಚಾರದ ವಾಹನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಈ ವಾಹನವನ್ನು ಸತೀಶ್



ಜಾರಕಿಹೊಳಿ ಅವರು ಬೆಳಗಾವಿ ಜಿಲ್ಲೆಯಲ್ಲಿ ಪ್ರಚಾರಕ್ಕೆ ಬಳಸಲಿದ್ದಾರೆ. ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಪ್ರಿಯಂಕಾ ಗಾಂಧಿ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸೇರಿದಂತೆ ನಾನು ಕೂಡ ಈ ವಾಹನವನ್ನು ಬೆಳಗಾವಿಗೆ ಬಂದಗಾ ಪ್ರಚಾರಕ್ಕಾಗಿ ಬಳಸಲಿದ್ದೇನೆ ಎಂದು ತಿಳಿಸಿದರು.

ಕಳೆದ ಚುನಾವಣೆಯಲ್ಲಿ 6 ಕ್ಷೇತ್ರದಲ್ಲಿ ನಮ್ಮ ಅಭ್ಯರ್ಥಿಗಳು ಗೆಲುವು ಸಾಧಿಸಿದ್ದರು. ಆದರೆ ಈ ಭಾರೀ ಕಾಂಗ್ರೆಸ್ ಪರ ಅಲೆ ಇದೆ. ಹೀಗಾಗಿ ಬೆಳಗಾವಿಯಲ್ಲಿ 15 ಸೀಟು ನಾವು ಗೆಲುವು ಸಾಧಿಸಲಿದ್ದೇವೆ, ಬಿಜೆಪಿ ಮಾಡಿರುವ ಭ್ರಷ್ಟಾಚಾರ, ದುರಾಡಳಿತ, ಜನ ವಿರೋಧಿ ನೀತಿಯಿಂದ ಜನರು ಬೇಸತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಘೋಷಣೆ ಮಾಡಿರುವ ಐದು ಗ್ಯಾರಂಟಿಯಿಂದ ಜನರಿಗೆ ನಂಬಿಕೆ ಬಂದಿದೆ. ಜನರಿಗೆ ಮೊದಲಿನಿಂದಲೂ ಕಾಂಗ್ರೆಸ್ ಪರ ನಂಬಿಕೆ ಇದೆ.

ಹಿಂದೆ ನಾವು ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ನಾವು ಜನರ ನಂಬಿಕೆ ಉಳಿಸಿಕೊಂಡಿದ್ದೇವು. ನುಡಿದಂತೆ ನಡಿದಿದ್ದೇವೆ.

ಮುಂದೆಯೂ ನಡೆಯುತ್ತೇವೆ. ಈ ಬಾರಿ ಕಾಂಗ್ರೆಸ್ ಗೆ ಜನ ಬೆಂಬಲಿಸುತ್ತಾರೆ ಎನ್ನುವ ವಿಶ್ವಾಸ ಇದೆ ಎಂದರು.

ಈ ಸಂದರ್ಭದಲ್ಲಿ ಎಐಸಿಸಿ ಕಾರ್ಯದರ್ಶಿ ವಿಷ್ಣುನಾದನ್, ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ, ಕೆಪಿಸಿಸಿ ಕಾರ್ಯದರ್ಶಿ ಸುನೀಲ್ ಹಣಮನ್ನವರ್, ಕಾಂಗ್ರೆಸ್ ನಗರ ಅಧ್ಯಕ್ಷ ರಾಜು ಸೇಠ್, ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಬೆಳಗಾವಿ ಗ್ರಾಮೀಣ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ, ಯುವ ನಾಯಕ ರಾಹುಲ್ ಜಾರಕಿಹೊಳಿ, ಕೆಪಿಸಿಸಿ ಸದಸ್ಯ ಮಲಗೌಡ ಪಾಟೀಲ್, ಕೆಪಿಸಿಸಿ ಸದಸ್ಯ ರಾಜೇಂದ್ರ ಪಾಟೀಲ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರದೀಪ್ ಎಂ.ಜೆ. ಸೇ–ರಿದಂತೆ ಅನೇಕರು ಇದ್ದರು.

# ದಲಿತ ಯುವತಿ ಮದುವೆಯಾಗಿದ್ದ ಮಗನನ್ನು ಕೊಂದ ತಂದೆ


ಕೃಷ್ಣಗಿರಿ: ದಲಿತ ಯುವತಿಯನ್ನು ಮದುವೆಯಾಗಿದ್ದಕ್ಕೆ 55 ವರ್ಷದ ವ್ಯಕ್ತಿಯೊಬ್ಬ ತನ್ನ ಮಗನನ್ನು ಕೊಲೆ ಮಾಡಿದ್ದು ಇನ್ನು ಮೊಮ್ಮಗನ ರಕ್ಷಣೆಗೆ ಬಂದಿದ್ದ ತಾಯಿಯನ್ನೂ ಆವೇಶದ ಭರದಲ್ಲಿ ಕೊಲೆ ಮಾಡಿರುವ ಘಟನೆ ಕೃಷ್ಣಗಿರಿ ಜಿಲ್ಲೆಯ ಉತ್ತಂಗರೈ ಬಳಿ ನಡೆದಿದೆ.

ಆರೋಪಿಯನ್ನು ಪಿ ದಂಡಪಾಣಿ ಎಂದು ಗುರುತಿಸಲಾಗಿದ್ದು ಆತ ತಿರುಪ್ಪೂರ್‌ನ ಹೋಸೈರಿ ಘಟಕದಲ್ಲಿ ಕೆಲಸ ಮಾಡುತ್ತಿದ್ದರು. ದಂಡಪಾಣಿ ಮಗು 25 ವರ್ಷದ ಸುಭಾಷ್ ಕೂಡ ಅಲ್ಲೇ ಕೆಲಸ ಮಾಡುತ್ತಿದ್ದನು. ಸುಭಾಷ್ ಅರಿಯಾಲೂರು ಮೂಲದ 24 ವರ್ಷದ ದಲಿತ ಯುವತಿ ಮತ್ತು ಸಹೋದ್ಯೋಗಿ ಅನುಷಾಳನ್ನು ಪ್ರೀತಿಸುತ್ತಿದ್ದ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಮಾರ್ಚ್ ಕೊನೆಯ ವಾರದಲ್ಲಿ ಅವರು ಮದುವೆಯಾದ್ದು ಮದುವೆಯ ನಂತರ ದಂಪತಿಗಳು ತಿರುಪತ್ತೂರಿನಲ್ಲಿ ನೆಲೆಸಿದ್ದರು. ಮಗ ದಲಿತ ಯುವತಿಯನ್ನು ಮದುವೆಯಾಗುವುದನ್ನು ದಂಡಪಾಣಿ ವಿರೋಧಿಸಿದ್ದರು. ಹೀಗಾಗಿ ಕಳೆದ ವಾರ ಕೃಷ್ಣಗಿರಿ ಜಿಲ್ಲೆಯ ಅರುಣಾಪತಿ ಎಂಬ ತಮ್ಮ ಗ್ರಾಮಕ್ಕೆ ಮರಳಿದರು. ಅಲ್ಲಿ ಅವರ ತಾಯಿ ಕನ್ನಮ್ಮಾಳ್ ವಾಸಿಸುತ್ತಿದ್ದರು. ಯುವ ದಂಪತಿಗಳನ್ನು ಗ್ರಾಮಕ್ಕೆ ಆಹ್ವಾನಿಸಿ ಮಾತುಕತೆ ನಡೆಸಿ ರಾಜಿ ಮಾಡಿಕೊಳ್ಳುವಂತೆ ತಾಯಿಗೆ ದಂಡಪಾಣಿ ಹೇಳಿದ್ದರು. ಕಳೆದ ವಾರ ಸುಭಾಷ್ ತನ್ನ ಅಜ್ಜಿಯನ್ನು ಭೇಟಿಯಾಗಲು ತನ್ನ ಹೆಂಡತಿಯೊಂದಿಗೆ ಗ್ರಾಮಕ್ಕೆ ಬಂದಿದ್ದನು. ಈ ವೇಳೆ ಆತನ ಅಜ್ಜಿ, ಸ್ಪಷ್ಟವಾಗಿ, ಸುಬಾಷ್ ನನ್ನು ಬೆಂಬಲಿಸಿದರು ಎಂದು ಉತ್ತಂಗರೈ ಡೆಪ್ಯುಟಿ ಸೂಪರಿಂಟೆಂಡೆಂಟ್ ಆಫ್ ಪೊಲೀಸ್ (ಡಿಎಸ್ಪಿ) ಅಮಲಾ ಅಡ್ವಿನ್ ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್‌ಗೆ ತಿಳಿಸಿದ್ದಾರೆ. ಆದರೆ, ಶನಿವಾರ ನಸುಕಿನಲ್ಲಿ ದಂಡಪಾಣಿ ದುಡುಕಿನ ನಿರ್ಧಾರ ಮಾಡಿದ್ದಾರೆ. ಮಗನ ಮೇಲೆ ಕುಡುಗೋಲಿನಿಂದ ಹಲ್ಲೆ ನಡೆಸಿದ್ದಾನೆ. ಮೊಮ್ಮಗನ ಕಿರುಚಾಟ ಕೇಳಿ ರಕ್ಷಿಸಲು ಯತ್ನಿಸಿದ ತಾಯಿಯ ಮೇಲೂ ಹಲ್ಲೆ ನಡೆಸಿದ್ದಾನೆ. ತನ್ನ ಸೊಸೆಯ ಮೇಲೂ ಹಲ್ಲೆ ನಡೆಸಿದ್ದಾನೆ. ಆದರೆ ವಧು ಗಾಯಗಳಿಂದ ಪಾರಾಗಿದ್ದಾಳೆ. ಏತನ್ಮಧ್ಯೆ, ನೆರೆಹೊರೆಯವರು ಸುಬಾಷ್, ಆತನ ಪತ್ನಿ ಮತ್ತು ಅಜ್ಜಿಯನ್ನು ಉತ್ತಂಗರೈನ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದರು. ಅಲ್ಲಿ ಸುಬಾಷ್ ಮತ್ತು ಕನ್ನಮ್ಮಾಳ್ ಮೃತಪಟ್ಟಿರುವುದಾಗಿ ಎಂದು ವೈದ್ಯರು ಘೋಷಿಸಿದರು. ಪೊಲೀಸರು ದಂಡಪಾಣಿ ವಿರುದ್ಧ ಪ್ರಕರಣ ದಾಖಲಿಸಿಕೊಂಡು ಆತನ ಪತ್ತೆಗೆ ಬಲೆ ಬೀಸಿದ್ದಾರೆ. ಕೃಷ್ಣಗಿರಿ ಜಿಲ್ಲೆಯಲ್ಲಿ ಇತ್ತೀಚಿನ ದಿನಗಳಲ್ಲಿ ವರದಿಯಾದ ಎರಡನೇ ಶಂಕಿತ 'ಮರ್ಯಾದೆ ಹತ್ಯೆ' ಇದಾಗಿದೆ. ಕಳೆದ ತಿಂಗಳು ವ್ಯಕ್ತಿಯೊಬ್ಬ ಅದೇ ಜಾತಿಗೆ ಸೇರಿದ ತನ್ನ ಅಳಿಯನನ್ನು ಕೊಲೆ ಮಾಡಿದ್ದನು.

# ಪ್ರಪಾತಕ್ಕೆ ಬಸ್ ಉರುಳಿ 12 ಜನರ ಸಾವು

ಮುಂಬೈ: ಸಂಗೀತ ತಂಡವೊಂದರ ಸದಸ್ಯರನ್ನು ಕರೆದೊಯ್ಯುತ್ತಿದ್ದ ಬಸ್ ಪ್ರಪಾತಕ್ಕೆ ಉರುಳಿದ ಪರಿಣಾಮ 12 ಜನರು ಸಾವನ್ನಪ್ಪಿದ ಘಟನೆ ಮಹಾರಾಷ್ಟ್ರದ ರಾಯಗಢ ಜಿಲ್ಲೆಯ ಮುಂಬೈ–ಪುಣೆ ಹೆದ್ದಾರಿಯಲ್ಲಿ ಮುಂಜಾನೆ ಸಂಭವಿಸಿದೆ.

ಪುಣೆಯಿಂದ ಮುಂಬೈಗೆ ಹೋಗುತ್ತಿದ್ದಾಗ ಹೆದ್ದಾರಿಯ ಶಿಂಗ್ರೋಬಾ ದೇವಸ್ಥಾನದ ಬಳಿ ಮುಂಜಾನೆ 4.50ರ ಸುಮಾರಿಗೆ ಈ ಅಪಘಾತ ಸಂಭವಿಸಿದೆ. ಘಟನೆಯಲ್ಲಿ 27 ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.



ಬಾಜಿ ಪ್ರಭು ವಾಡಕ್ ಗ್ರೂಪ್ನ ಸದಸ್ಯರು ಪುಣೆ ಜಿಲ್ಲೆಯ ಪಿಂಪ್ರಿ ಚಿಂಚ್ವಾಡ್ನ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿ ಮುಂಬೈನ ಗೋರೆಗಾಂವ್ಗೆ ಹಿಂತಿರುಗುತ್ತಿದ್ದರು.

ಶನಿವಾರ ನಡುರಾತ್ರಿ 1 ಗಂಟೆ ಸುಮಾರಿಗೆ ಬಸ್ ಸ್ಥಳದಿಂದ ನಿರ್ಗಮಿಸಿತ್ತು. ಪ್ರಯಾಣಿಕರು ಮುಂಬೈನ ಸಿಯಾನ್ ಮತ್ತು ಗೋರೆಗಾಂವ್ನ ನೆರೆಯ ಪಾಲ್ಘರ್ ಜಿಲ್ಲೆಯ ವಿರಾರ್‌ಗೆ ಸೇರಿದವರು ಎಂದು ರಾಯಗಢ ಪೊಲೀಸ್ ವ–ರಿಷ್ಠಾಧಿಕಾರಿ ಸೋಮನಾಥ್ ಘರ್ಗೆ ತಿಳಿಸಿದ್ದಾರೆ.

ಸ್ಥಳೀಯ ಪೊಲೀಸರ ತಂಡ ಮತ್ತು ಚಾರಣಿಗರ ತಂಡ ಸದ್ಯ ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದೆ. ಗಾಯಾಳುಗಳನ್ನು ಖೋಪೋಲಿ ಗ್ರಾಮಾಂತರ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಮಾಜಿ ಸಚಿವ, ಕಾಂಗ್ರೆಸ್ ಅಭ್ಯರ್ಥಿ ಬಾಬುರಾವ್ ಚಿಂಚನಸೂರ್ ಕಾರು ಅಪಘಾತ

ಕಲಬುರಗಿ: ಗುರುಮಠಕಲ್ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ಮಾಜಿ ಸಚಿವ ಬಾಬುರಾವ್ ಚಿಂಚನಸೂರ್ ಅವರ ಕಾರು ಅಪಘಾತವಾಗಿದೆ. ರಾತ್ರಿ 12:30 ರ ಸುಮಾರಿಗೆ ಕಲಬುರಗಿಯ ಆಕಾಶವಾಣಿ ಕೇಂದ್ರದ ಬಳಿ ಘಟನೆ ನಡೆದಿದೆ.

ಅಪಘಾತದಲ್ಲಿ ಚಿಂಚನಸೂರ್ ಕಾಲು ಮತ್ತು ಮುಖಕ್ಕೆ ಗಾಯಗಳಾಗಿವೆ. ಸ್ಥಳೀಯರು ಬಾಬುರಾವ್ ಚಿಂಚನಸೂರ್ ಅವರನ್ನು ಕಲಬುರಗಿಯ ಯುನೈಟೆಡ್ ಆಸ್ಪತ್ರೆಗೆ ದಾಖಲಿಸಿದ್ದಾರೆ. ಶುಕ್ರವಾರ ಚುನಾವಣಾ ಪ್ರಚಾರ ಮುಗಿಸಿ ಯಾದಗಿರಿಯಿಂದ ಕಲಬುರಗಿಯತ್ತ ಪ್ರಯಾಣಿಸುತ್ತಿದ್ದ ವೇಳೆ ನಿದ್ದೆಯ ಮಂಪರಿನಲ್ಲಿದ್ದ ವಾಹನ ಚಾಲಕನಿಗೆ ರಸ್ತೆಯ ಮಧ್ಯೆ ಇರುವ ಗುಂಡಿ ಕಾಣದೆ ಕಾರು ಗುಂಡಿಯಲ್ಲಿ ಸಿಲುಕಿ ಸ್ಕಿಡ್ ಆಗಿದೆ. ಇದರಿಂದ ವಾಹನ ಚಾಲಕನ ನಿಯಂತ್ರಣ ತಪ್ಪಿ ಅಪಘಾತ ಸಂಭವಿಸಿದೆ.

ಕಾರ್‌ನಲ್ಲಿ ಬಾಬುರಾವ್ ಚಿಂಚನಸೂರು, ಇಬ್ಬರು ಚಾಲಕರು, ಓರ್ವ ಗನ್ ಮ್ಯಾನ್ ಇದ್ದರು ಎಂದು ತಿಳಿದು ಬಂದಿದ್ದು, ಇವರಿಗೆ ಯಾವುದೇ ಗಾಯಗಳಾಗಿಲ್ಲ. ಗುರುಮಠಕಲ್ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಬಾಬುರಾವ ಅವರ ಮನೆ ಕಲಬುರಗಿಯ ಶಾಂತಿನಗರದಲ್ಲಿದ್ದು, ಕ್ಷೇತ್ರದಲ್ಲಿ ಪ್ರಚಾರ ಮುಗಿಸಿಕೊಂಡು ವಾಪಸ್ ಬರುವಾಗ ಅಪಘಾತ ಸಂಭವಿಸಿದೆ.

# ಸರ್ವಜನಾಂಗದ ಬದುಕಿಗೆ ಹಕ್ಕು, ಕರ್ತವ್ಯ ನೀಡಿದ ಅಂಬೇಡ್ಕರ್‌ರ ತತ್ವಗಳು ಸರ್ವಕಾಲಿಕ

ಹುಕ್ಕೇರಿ : ಒಂದೆ ಜಾತಿಗೆ ಸೀಮಿತವಾಗದೆ ಸರ್ವಜನಾಂಗದ ಬದುಕಿಗೆ ಹಕ್ಕು ಮತ್ತು ಕರ್ತವ್ಯಗಳನ್ನು ನೀಡಿದ ಮಹಾನ ಚೇತನ ಡಾ.ಬಿ.ಆರ್. ಅಂಬೇಡ್ಕರ್ ಅವರ ತತ್ವಗಳು ಸರ್ವಕಾಲಿಕ ಎಂದು ಹಿರಾಶುಗರ ಕಾರ್ಖಾನೆ ಅಧ್ಯಕ್ಷ ನಿಖಿಲ್ ಕತ್ತಿ ಹೇಳಿದರು.

ಅವರು ಹುಕ್ಕೇರಿ ಪಟ್ಟಣದಲ್ಲಿ ನಡೆದ ಡಾ.ಬಿ.ಆರ್.ಅಂಬೇಡ್ಕರ್ 132 ನೇ ಜನ್ಮ ದಿನಾಚರಣೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಪುರಸಭೆ ಸದಸ್ಯ ಮಹಾವೀರ ನಿಲಜಗಿ. ಪವನ ಕತ್ತಿ,ಮಲ್ಲಪ್ಪ ಬಿಸಿರೊಟ್ಟಿ. ಉದಯ ಹುಕ್ಕೇರಿ., ಮಹಾಂತೇಶ ತಳವಾರ ರಮೇಶ ಹುಂಜಿ ಪಿಂಟು ಶೆಟ್ಟಿ, ಶಿವು ಮಾಳಗಿ.ಬಾಹುಸಾಹೇಬ ಪಾಂಡ್ರೆ ಪಾಂಡ್ರೆ,ಮತ್ತಿತರರು. ಉಪಸ್ಥಿತರಿದ್ದರು.

ತಾಲೂಕು ಪಂಚಾಯತಿ ಆವರಣ– ತಾಲೂಕಾ ಆಡಳಿತ ಮತ್ತು ಸಮಾಜ ಕಲ್ಯಾಣ ಇಲಾಖೆ ಆಶ್ರಯದಲ್ಲಿ ನಡೆದ ನೇ ಜಯಂತಿ ಉತ್ಸವವನ್ನು ಅದ್ದೂ–ರಿಯಾಗಿ ಜರುಗಿದ ಕಾರ್ಯಕ್ರಮದಲ್ಲಿ ಪಟ್ಟಣದಲ್ಲಿ ಭಾವ ಚಿತ್ರದ ಭವ್ಯ ಮೆರವಣಿಗೆ, ವಾದ್ಯಮೇಳದೊಂದಿಗೆ ಜರುಗಿತು.

ಸಾನಿದ್ಯ ವಹಿಸಿದ್ದ ಹೆಬ್ಬಾಳ ಚೇತನ ಮಹಾಸ್ವಾಮಿಗಳು



ಮಾತನಾಡಿದರು. ಕಲಬುರಗಿ ,ಕೆ. ವಗ್ಗನವರ, ಕಲ್ಮೇಶ ಉಪನ್ಯಾಸ ನೀಡಿದರು. ಉಪತಹಶಿಲ್ದಾರ ಎನ್ ಅರ. ಪಾಟೀಲ.ಅಧ್ಯಕ್ಷತೆ ವಹಿಸಿದ್ದರು. ಸಮಾಜ ಕಲ್ಯಾಣ ಸಹಾಯಕ ನಿರ್ದೇಶಕ ಎಚ್ ಎ ಮಾಹುತ ಪ್ರಾಸ್ತಾವಿಕವಾಗಿ ಮಾತನಾಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಮೋಹನ ದಂಡಿನ ಸ್ವಾಗತಿಸಿದರು.

ಭಾವ ಚಿತ್ರದ ಮೆರವಣಿಗೆ:

ಪಟ್ಟಣದ ಅಡವಿ ಸಿದ್ದೇಶ್ವರ ಮಠದ ಆವರಣದಲ್ಲಿ ಭಾವಚಿತ್ರಕ್ಕೆ ಉಪ ತಹಸಿಲ್ದಾರ ಎನ್ ಆರ್ ಪಾಟೀಲ ಪೂಜೆ ಸಲ್ಲಿಸಿ ಮೆರವಣಿಗೆ ಚಾಲನೆ ನೀಡಿದರು. ಮುಖಂಡರಾದ ಉದಯ ಹುಕ್ಕೇರಿ, ಮಾತನಾಡಿ ಸಾಮಾಜಿಕ, ಶೈಕ್ಷಣಿಕ,ರಾಜಕೀಯ, ಧಾರ್ಮಿಕವಾಗಿ ಎಲ್ಲ ರಂಗಗಳಲ್ಲಿ ಸಮಾಜಪೂರಕ ಸೇವೆ ನೀಡಿದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ.

ಸಮಾಜ ಮುಖಂಡರಾದ ಬಾಹುಸಾಹೇಬ ಪಾಂಡ್ರೆ, ಕೆಂಪಣ್ಣ ಶಿರಹಟ್ಟಿ, ಸದಾಶಿವ ಕಾಂಬಳೆ, ಶಂಕರ ಕಟ್ಟಿಮನಿ, ಶಶಿಕಾಂತ ಹೊನ್ನಳ್ಳಿ, ಅರುಣ ಮಾಳಗೆ, ಕಾಡೇಶ ಹೊಸಮನಿ,ವಿಶಾಲ ಸೂರ್ಯವಂಶಿ, ಗೋಪಾಲ ಕಾಂಬಳೆ, ಬಿ ಕೆ ಸದಾ, ಮಲ್ಲೆಶಿ ಭಂಡಾರೆ,ಶ್ರೀಕಾಂತ ತಳವಾರ, ಸರೋಜಾ ಕಾಂಬಳೆ, ಎಲ್ ಬಿ ಮಾಲದಾರ, ಎಸ್ ಎಮ್ ನಡಮನಿ, ಎಮ್ ಬಿ ಕಾಂಬಳೆ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತ–ರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089